ಸಂಪುಟ 01 | ಸಂಚಿಕೆ 203 ಭಾನುವಾರ 27 ಸೆಪ್ಟೆಂಬರ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)ವಿಶ್ವ ಪ್ರವಾಸೋದ್ಯಮ ದಿನ (World Tourism Day)
ಪ್ರತಿ ವರ್ಷ ಸೆಪ್ಟೆಂಬರ್ 27ರಂದು ಆಚರಿಸಲಾಗುತ್ತದೆ. ಪ್ರವಾಸೋದ್ಯಮದ ಮಹತ್ವ, ವಿವಿಧ ಸಂಸ್ಕೃತಿಗಳ ಪರಿಚಯ ಹಾಗೂ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಯಲ್ಲಿ ಪ್ರವಾಸೋದ್ಯಮದ ಪಾತ್ರದ ಕುರಿತು ಜಾಗೃತಿ ಮೂಡಿಸುವ ದಿನವಾಗಿದೆ.

2)World Rivers Day 2026 ಅನ್ನು ಸೆಪ್ಟೆಂಬರ್ 27, 2026 ಭಾನುವಾರ ಆಚರಿಸಲಾಗುತ್ತದೆ. ಇದು ಪ್ರತಿವರ್ಷ ಸೆಪ್ಟೆಂಬರ್‌ನ ನಾಲ್ಕನೇ ಭಾನುವಾರ ನಡೆಯುತ್ತದೆ.

ಸುಭಾಷಿತ

ಸೇಡಿಗಾಗಿ ಹೋರಾಡಿ ಯಾರೂ ಗೆದ್ದಿಲ್ಲ,
ಕ್ಷಮಾದಾನದಿಂದ ಯಾರೂ ಸೋತಿಲ್ಲ.

-ಗೌತಮ ಬುದ್ಧ

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಚಂದ್ರು ಅವರು ಮಾಜಿ ಮುಖ್ಯಮಂತ್ರಿ ಆಗೋದೇ ಇಲ್ಲ, ಅವರು ಶಾಶ್ವತ ಮುಖ್ಯಮಂತ್ರಿ – ಸಿದ್ದರಾಮಯ್ಯ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಮುಖ್ಯಮಂತ್ರಿ ಚಂದ್ರು ತಮ್ಮ ಆತ್ಮೀಯ ಸ್ನೇಹಿತರಾಗಿದ್ದು, ಹಲವು ವರ್ಷಗಳಿಂದ ಅವರೊಂದಿಗೆ ಒಡನಾಟ ಹೊಂದಿರುವುದಾಗಿ ಸಿದ್ದರಾಮಯ್ಯ ಅವರು ಹೇಳಿದರು.

ಚಂದ್ರು ಅವರ ಈ ವಿಶೇಷ ಸಂದರ್ಭದಲ್ಲಿ ಅವರ ಧರ್ಮಪತ್ನಿ, ಕುಟುಂಬದ ಸದಸ್ಯರು ಹಾಗೂ ಒಡನಾಡಿಗಳು ಸೇರಿ ಕಾರ್ಯಕ್ರಮ ಆಯೋಜಿಸಿರುವುದು ಸಂತಸ ತಂದಿದೆ ಎಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಹರ್ಷ ವ್ಯಕ್ತಪಡಿಸಿದರು. ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ 'ಮುಖ್ಯಮಂತ್ರಿ' ನಾಟಕದ 900ನೇ ಪ್ರದರ್ಶನವನ್ನು ವೀಕ್ಷಿಸಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಬಳಿಕ ನಾಟಕದ ಪ್ರಮುಖ ಪಾತ್ರಧಾರಿ ಮುಖ್ಯಮಂತ್ರಿ ಚಂದ್ರು ಅವರನ್ನು ಅಭಿನಂದಿಸಿ ಅವರು ಮಾತನಾಡುತ್ತಾ ಕಾಲ ಬಹಳ ವೇಗವಾಗಿ ಉರುಳುತ್ತದೆ.

ಮುಖ್ಯಮಂತ್ರಿ ಚಂದ್ರು ಅವರು ಹಲವು ವರ್ಷಗಳಿಂದ ನಿರಂತರವಾಗಿ ಸಮಾಜ-ಕ್ಕೆ ಹಾಗೂ ರಂಗಭೂಮಿಗೆ ಸೇವೆ ಸಲ್ಲಿಸುತ್ತಾ ಬಂದಿದ್ದಾರೆ. ಅವರಿಗೆ ಈಗ 73 ವರ್ಷ ತುಂಬಿದ್ದರೂ ಉತ್ಸಾಹ ಮಾತ್ರ ಕಿಂಚಿತ್ತೂ ಕಡಿಮೆಯಾಗಿಲ್ಲ ಎಂದು ಸಿದ್ದರಾಮಯ್ಯ ಹೇಳಿದರು. ಮುಖ್ಯಮಂತ್ರಿ ಚಂದ್ರು ಅವರು 93 ನಾಟಕಗಳಲ್ಲಿ



ಅಭಿನಯಿಸಿದ್ದು, ಒಂದೊಂದು ನಾಟಕವನ್ನು ಸಿದ್ಧಪಡಿಸುವುದು, ನಟಿಸುವುದು ಅಷ್ಟು ಸುಲಭದ ವಿಷಯವಲ್ಲ. ನಾಟಕದಲ್ಲಿ 93ನೇ ಪ್ರಯೋಗವನ್ನು ಪೂರೈಸಿರುವುದು ವಿಶೇಷ ಸಾಧನೆ. ಸಿನಿಮಾದಲ್ಲೂ ಅವರು 530ಕ್ಕೂ ಹೆಚ್ಚು ಪಾತ್ರಗಳನ್ನು ನಿರ್ವಹಿಸಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದರು.

ನಾನು ಎಂಟು ವರ್ಷ ಮುಖ್ಯಮಂತ್ರಿ ಆಗಿದ್ದೆ. ಈಗ ಮಾಜಿ ಮುಖ್ಯಮಂತ್ರಿ ಆಗಿದ್ದೇನೆ. ಆದರೆ ಚಂದ್ರು ಅವರು ಮಾತ್ರ ಮಾಜಿ ಮುಖ್ಯಮಂತ್ರಿ ಆಗೋದೇ ಇಲ್ಲ. ಅವರು ಶಾಶ್ವತ ಮುಖ್ಯಮಂತ್ರಿ ಎಂದು ಸಿದ್ದರಾಮಯ್ಯ ಹೇಳಿದರು. ಮುಖ್ಯಮಂತ್ರಿ ಚಂದ್ರು ಅವರ ಅದ್ಭುತ ಅಭಿನಯದಿಂದ 'ಮುಖ್ಯಮಂತ್ರಿ' ನಾಟಕವನ್ನು ವೀಕ್ಷಿಸುವ ಪ್ರೇಕ್ಷಕರು ಮಂತ್ರಮುಗ್ಧರಾಗುತ್ತಾರೆ. ಸಮಾಜದಲ್ಲಿ ಕಾಲಕ್ಕೆ ತಕ್ಕಂತೆ ಹಲವು ಬದಲಾವಣೆಗಳು ನಡೆದಿದ್ದರೂ, ತಪ್ಪುಗಳು ಇನ್ನೂ ಮುಂದುವರಿದಿವೆ. ಅಂತಹ ತಪ್ಪುಗಳನ್ನು ಸಮಾಜದ ಮುಂದೆ ಎತ್ತಿ ತೋರಿಸುವ ಕೆಲಸವನ್ನು ರಂಗಭೂಮಿ ನಿರಂತರವಾಗಿ ಮಾಡಿಕೊಂಡು ಬಂದಿದೆ ಎಂದು ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಸಿನಿಮಾದಲ್ಲಿ ನಿರ್ದೇಶಕರು ಇರುವುದ-ರಿಂದ ತಪ್ಪಾದರೆ 'ಕಟ್' ಹೇಳಿ ಮತ್ತೊಂದು ದೃಶ್ಯವನ್ನು ಚಿತ್ರೀಕರಿಸಲು ಅವಕಾಶವಿರುತ್ತದೆ. ಆದರೆ ರಂಗಭೂಮಿಯಲ್ಲಿ ಅಂತಹ ಅವಕಾಶವಿಲ್ಲ. ಪ್ರೇಕ್ಷಕರ ಎದುರು ನೇರವಾಗಿ ಅಭಿನಯಿಸಬೇಕಾಗುತ್ತದೆ. ಇದು ರಂಗಭೂಮಿಯ ಕಲಾವಿದರಿಗೆ ಇರುವ ದೊಡ್ಡ ಸವಾಲು ಎಂದು ಹೇಳಿದರು. ತಮ್ಮ ಹಾಗೂ ಮುಖ್ಯಮಂತ್ರಿ ಚಂದ್ರು ಅವರ ರಾಜಕೀಯ ಪ್ರವೇಶವನ್ನು ಸ್ಮರಿಸಿದ ಸಿದ್ದರಾಮಯ್ಯ ಅವರು "ನಾನು 1983ರಲ್ಲಿ ಶಾಸಕನಾದೆ. ಚಂದ್ರು ಅವರು 1985ರಲ್ಲಿ ಶಾಸಕರಾದರು. ರಾಮಕೃಷ್ಣ ಹೆಗಡೆಯವರು ಚಂದ್ರು ಅವರನ್ನು ರಾಜ-ಕೀಯಕ್ಕೆ ಕರೆತಂದು ಶಾಸಕರನ್ನಾಗಿ ಮಾಡಿದರು.

ಅವರು ಶಾಸಕರಾಗಿ, ಎಂಎಲ್ಸಿಯಾಗಿ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಕನ್ನಡ ನಾಡು ನುಡಿಗಾಗಿ ಅಪಾರವಾದ ಸೇವೆ ಸಲ್ಲಿಸಿ, ರಾಜ್ಯದಾದ್ಯಂತ ಸಂಚರಿಸಿ ಕನ್ನಡದ ಕಹಳೆ ಮೊಳಗಿಸಿದ್ದಾರೆ ಎಂದು ಹೇಳಿದರು. ಮುಖ್ಯಮಂತ್ರಿ ಚಂದ್ರು ಅವರು ಇನ್ನಷ್ಟು ವರ್ಷಗಳ ಕಾಲ ಆರೋಗ್ಯದಿಂದ ಬದುಕಿ, ಇನ್ನಷ್ಟು ನಾಟಕಗಳಲ್ಲಿ ಅಭಿನಯಿಸಬೇಕು. ಅವ-ರಿಗೆ ಭಗವಂತ ಆಯುಷ್ಯ ಮತ್ತು ಆರೋಗ್ಯ ನೀಡಲಿ ಎಂದು ಸಿದ್ದರಾಮಯ್ಯ ಶುಭ ಹಾರೈಸಿದರು.

ರವೀಂದ್ರ ಕಲಾಕ್ಷೇತ್ರದಲ್ಲಿ ಇಂದು ಆಯೋಜಿಸಿದ್ದ ಮುಖ್ಯಮಂತ್ರಿ ನಾಟಕದ 900ನೇ ಪ್ರದರ್ಶನವನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವೀಕ್ಷಿಸಿದರು ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ವಿ. ಸೋಮಣ್ಣ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್. ಎಂ. ರೇವಣ್ಣ ಸೇರಿದಂತೆ ಕಲಾಭಿಮಾನಿಗಳು ಕಲಾವಿದರು ಸಮಾರಂಭದಲ್ಲಿ ಭಾಗಿಯಾಗಿದ್ದರು

ರಾಜ್ಯ ಎನ್‌ಎಸ್‌ಎಸ್ ಪ್ರಶಸ್ತಿಗೆ ನಾಗರಾಜ ಆಯ್ಕೆ

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಪಟ್ಟಣದ ದೇವನಾಂಪ್ರಿಯ ಅಶೋಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಬಿ.ಎ. ತೃತೀಯ ಸೆಮಿಸ್ಟರ್ ವಿದ್ಯಾರ್ಥಿ ನಾಗರಾಜ ಅವರು ರಾಜ್ಯಮಟ್ಟದ ಉತ್ತಮ ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಸ್ವಯಂಸೇವಕ ಪ್ರಶಸ್ತಿ 2026ಕ್ಕೆ ಆಯ್ಕೆಯಾಗಿದ್ದಾರೆ.

ಕರ್ನಾಟಕ ಗಾಂಧಿ ಸ್ಮಾರಕ ನಿಧಿ ವತಿಯಿಂದ ಪ್ರೊ. ಜಿ.ಬಿ. ಶಿವರಾಜು ಅವರ ಹೆಸರಿನಲ್ಲಿ ಸ್ಥಾಪಿಸಿರುವ 'ರಾಜ್ಯದ ಉತ್ತಮ ರಾಷ್ಟ್ರೀಯ ಸೇವಾ ಯೋಜನೆ ಸ್ವಯಂಸೇವಕ ಪ್ರಶಸ್ತಿ 2026'ಗೆ ನಾಗರಾಜ ಅವರನ್ನು ಆಯ್ಕೆ ಮಾಡಲಾಗಿದೆ. ಅಕ್ಟೋಬರ್ 2ರಂದು ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಸಾಮಾಜಿಕ ಸೇವೆ, ಎನ್‌ಎಸ್‌ಎಸ್ ಚಟುವಟಿ-ಕೆಗಳಲ್ಲಿ ಸಕ್ರಿಯ ಪಾಲ್ಗೊಳ್ಳುವಿಕೆ, ಶಿಸ್ತು, ಉತ್ತಮ ನಡವಳಿಕೆ, ಜವಾಬ್ದಾರಿಯುತ ನಡೆ ಹಾಗೂ ಸೇವಾ ಮನೋಭಾವವನ್ನು ಪರಿಗಣಿಸಿ ನಾಗರಾಜ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.




ಎನ್‌ಎಸ್‌ಎಸ್ ಸ್ವಯಂಸೇವಕರಾಗಿ ನಾಗರಾಜ ಅವರು ವಿವಿಧ ಶಿಬಿರಗಳು ಹಾಗೂ ಸಾಮಾಜಿಕ ಸೇವಾ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಾರೆ. ಕರ್ನಾಟಕ ಗಾಂಧಿ ಸ್ಮಾರಕ ನಿಧಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಮಹಾತ್ಮ ಗಾಂಧಿ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ ಇವರ ಸಂಂ-ಯುಕ್ತ ಆಶ್ರಯದಲ್ಲಿ ಆಗಸ್ಟ್ 24ರಿಂದ 30ರವರೆಗೆ ಗದಗದಲ್ಲಿ ನಡೆದ 'ಗಾಂಧಿ ವಿಚಾರಗಳ ಮೂಲಕ ಮಾನವೀಯ ಮೌಲ್ಯಗಳು' ಎಂಬ ಅಖಿಲ ಭಾರತ ವಿಶ್ವವಿದ್ಯಾಲಯ ಯುವ ಶಿಬಿರದಲ್ಲಿಯ ಸಕ್ರಿಯವಾಗಿ ಪಾಲ್ಗೊಂಡು ಗಮನಾರ್ಹ ಸೇವೆ ಸಲ್ಲಿಸಿದ್ದಾರೆ. ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜೊತೆಗೆ ಸಾಮಾಜಿ-ಕ ಜವಾಬ್ದಾರಿ, ಸೇವಾ ಮನೋಭಾವ, ನಾಯಕತ್ವ ಗುಣ, ಶಿಸ್ತು ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಲು ಕಾಲೇಜು ನಿರಂತರವಾಗಿ ಪ್ರೋತ್ಸಾಹಿಸುತ್ತಿದೆ. ನಾಗರಾಜ ಅವರ ರಾಜ್ಯಮಟ್ಟದ ಪ್ರಶಸ್ತಿ ಆಯ್ಕೆಯು ಅವರ ವೈಯಕ್ತಿಕ ಸಾಧನೆಯ ಜೊತೆಗೆ ಕಾಲೇಜಿನ ಸೇವಾ ಚಟುವಟಿಕೆಗಳಿಗೂ ದೊರೆತ ಗೌರವವಾಗಿದೆ.

ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗೆ ಆಯ್ಕೆಯಾದ ಅಮರೇಶ್ ಹೂಗಾರ್

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ರೋಟರಿ ಕ್ಲಬ್ ವತಿಯಿಂದ ಸೆಪ್ಟೆಂಬರ್ 27ರಂದು ರಾಯಚೂರಿನ ಕೃಷಿ ಕಾಲೇಜಿನ ಸಿಲ್ವರ್ ಜುಬ್ಲಿ ಆವರಣದಲ್ಲಿ ಜಿಲ್ಲಾಮಟ್ಟದ ಉತ್ತಮ ಶಿಕ್ಷಕರಾಗಿ ಆಯ್ಕೆಯಾದ ಶ್ರೀ ಅಮರೇಶ್ ಹೂಗಾರ್ ಅವರಿಗೆ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಸಿರವಾರ ತಾಲೂಕಿನ ಕವಿತಾಳ ಗ್ರಾಮದಲ್ಲಿ ಜನಿಸಿದ ಅಂಬರೀಶ್ ಹೂಗಾರ್ ಅವರು 2 ಆಗಸ್ಟ್ 1994ರಂದು ಶಿಕ್ಷಕರಾಗಿ ಸೇವೆಗೆ ಸೇರ್ಪಡೆಯಾದರು. ತಮ್ಮ ವೃತ್ತಿ ಜೀವನವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವಟಗಲ್‌ನಲ್ಲಿ ಶಿಕ್ಷಕರಾಗಿ ಆರಂಭಿಸಿ, ನಂತರ ಅದೇ ಶಾಲೆಯಲ್ಲಿ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದರು. ಮುಂದುವರಿದು 2009ರಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಚಿಕ್ಕಹಣಿಗಿಯಲ್ಲಿ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಿದರು. ಬಳಿಕ ಮಾನ್ವಿ



ಬಿಆರ್‌ಸಿ ಕೇಂದ್ರದಲ್ಲಿ ಬಿಆರ್‌ಪಿ ಯಾಗಿ ಸೇವೆ ಸಲ್ಲಿಸಿದ್ದಾರೆ

ನಂತರ ಮುಂಬಡ್ತಿ ಪಡೆದು ಸಿಂಧನೂರು ತಾಲೂಕಿನ ಪಗಡದಿನ್ನಿ ಸರ್ಕಾರಿ ಪ್ರೌಢಶಾಲೆಯಲ್ಲಿ 2011ರಿಂದ 2016ರವರೆಗೆ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿದರು. ಅಲ್ಲಿಂದ ವರ್ಗಾವಣೆಗೊಂಡು ಸರ್ಕಾರಿ ಪ್ರೌಢಶಾಲೆ, ಸುಕಲ್ಪೇಟೆಯಲ್ಲಿ 2016ರಿಂದ 2026 ರವರೆಗೆ ಸಹ ಶಿಕ್ಷಕರಾಗಿ ಸೇವೆ ಸಲ್ಲಿಸಿದರು. ಶಿಕ್ಷಣ ಕ್ಷೇತ್ರದಲ್ಲಿ ಹಲವು ವರ್ಷಗಳ ಕಾಲ ಸಲ್ಲಿಸಿದ ಸೇವೆ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ನೀಡಿದ ಕೊಡುಗೆ ಹಾಗೂ ಕರ್ತವ್ಯನಿಷ್ಠೆಯನ್ನು ಗುರುತಿಸಿ ಅವರಿಗೆ ಈಗಾಗಲೇ ರಾಜ್ಯಮಟ್ಟದ ಪ್ರಶಸ್ತಿಗಳು ಹಾಗೂ ಜಿಲ್ಲಾಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿಗಳು ಲಭಿಸಿವೆ.

ಶಿಕ್ಷಣ ಕ್ಷೇತ್ರದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಅಂಬರೀಶ್ ಹೂಗಾರ್ ಅವರು ಮತ್ತೊಮ್ಮೆ ಜಿಲ್ಲಾಮಟ್ಟದ ಉತ್ತಮ ಶಿಕ್ಷಕರಾಗಿ ಆಯ್ಕೆಯಾಗಿರುವುದು ಅವರ ಕುಟುಂಬ, ಸಹೋದ್ಯೋಗಿಗಳು, ವಿದ್ಯಾರ್ಥಿಗಳು ಹಾಗೂ ಶೈಕ್ಷಣಿಕ ವಲಯಕ್ಕೆ ಹೆಮ್ಮೆಯ ಸಂಗತಿಯಾಗಿದೆ. ಈ ಹಿನ್ನೆಲೆಯಲ್ಲಿ ರೋಟರಿ ಕ್ಲಬ್ ವತಿಯಿಂದ ಆಯೋಜಿಸಿರುವ ಸನ್ಮಾನ ಸಮಾರಂಭದಲ್ಲಿ ಗಣ್ಯರು, ಶಿಕ್ಷಣ ಇಲಾಖೆಯ ಅಧಿಕಾ-ರಿಗಳು, ಶಿಕ್ಷಕರು, ವಿವಿಧ ಸಂಘಟನೆಗಳ ಪ್ರತಿನಿಧಿಗಳು ಹಾಗೂ ಅವರ ಅಭಿಮಾನಿಗಳು ಭಾಗವಹಿಸಲಿದ್ದಾರೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹ: ಮೈಸೂರಿನಲ್ಲಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ ಸೆಪ್ಟೆಂಬರ್ 26 ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಕಾರ್ಯವೈಖರಿ ,ಸರ್ವಾಧಿಕಾರಿ ಧೋರಣೆಯನ್ನು ತೀವ್ರವಾಗಿ ಖಂಡಿಸಿ ಕೂಡಲೇ ಅವರು ರಾಜೀನಾಮೆ ನೀಡಬೇಕು ಹಾಗೂ ಬಂಧಿಸಬೇಕು ಎಂದು ಒತ್ತಾಯಿಸಿ ಮೈಸೂ-ರಿನ ರಾಮಸ್ವಾಮಿ ವೃತ್ತದಲ್ಲಿ ಮಾಜಿ ಶಾಸಕ ಎಂ ಕೆ ಸೋಮಶೇಖರ್ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರು ಕಾರ್ಯಕರ್ತ-ರಿಂದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಇದೇ ವೇಳೆ ಮಾತನಾಡಿದ ಎಮ್ ಕೆ ಸೋಮಶೇಖರ್ ಅವರು ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರ ಕಾರ್ಯವೈಖರಿ ,ಸರ್ವಾಧಿಕಾರಿ ಧೋರಣೆಯನ್ನು ತೀವ್ರವಾಗಿ ನಾವುಖಂಡಿಸಿ ಕೂಡಲೇ ಅವರು ರಾಜೀನಾಮೆ ನೀಡಬೇಕು ಅವರನ್ನು



ಬಂಧಿಸಬೇಕು ಎಂದು ಆಗ್ರಹಿಸಿದರು ಹಾಗೂ ಕೇಂದ್ರ ಬಿಜೆಪಿ ಸರ್ಕಾರದ ಒತ್ತಡಕ್ಕೆ ಮಣಿದು ಚುನಾವಣಾ ಆಯೋಗದ ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ಕಾರ್ಯನಿರ್ವಹಿಸುತ್ತಿದ್ದಾರೆ

ಎಂಬ ಆರೋಪಗಳ ಹಿನ್ನೆಲೆಯಲ್ಲಿ, ಚುನಾವಣಾ ಆಯೋಗದ ಸ್ವತಂತ್ರತೆ ಮತ್ತು ನಿಷ್ಪಕ್ಷಪಾತತೆಯನ್ನು ಕಾಪಾಡಬೇಕೆಂದು ಪ್ರತಿಭಟನೆಯಲ್ಲಿ ಒತ್ತಾಯಿಸಿದರು ಪ್ರತಿಭಟನೆ ವೇಳೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮುಖಂಡರುಗಳು ಚುನಾವಣಾ ಆಯೋಗದ ಆಯುಕ್ತರ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು "ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಹಠಾವೋ ಡೆಮಾಕ್ರಸಿ ಬಚಾವೋ" ಎಂಬ ಘೋಷಣೆಗಳೊಂದಿಗೆ ಪ್ರತಿಭಟನೆ ನಡೆಸಿ, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಮತದಾರರ ಹಕ್ಕುಗಳ ರಕ್ಷಣೆಗೆ ಒತ್ತಾಯಿಸಲಾಯಿತು. ಚುನಾವಣಾ ಆಯೋಗವು ಸಂವಿಧಾನಾತ್ಮಕವಾಗಿ ಸ್ವತಂತ್ರ ಸಂಸ್ಥೆಯಾಗಿದ್ದು, ದೇಶದ ಚುನಾವಣಾ ಪ್ರಕ್ರಿಯೆಯನ್ನು ನಿರ್ವಹಿಸುವ ಜವಾಬ್ದಾರಿ ಹೊಂದಿದೆ. ಎಂದು ಪ್ರತಿಭಟನಾಕಾರರು ತಿಳಿಸಿದರು ಪ್ರತಿಭಟನೆಯಲ್ಲಿ ಸುಮಾರು 500ಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಮುಖಂಡರುಗಳು ಭಾಗಿಯಾಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು

ರೇಬಿಸ್ ಜಾಗೃತಿ ಸಪ್ತಾಹ ಅಂಗವಾಗಿ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಜಾಗೃತಿ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಸಮೀಪದ ಗೌಡನಭಾವಿ ಆರೋಗ್ಯ ಮತ್ತು ಕ್ಷೇಮ ಮಂದಿರದಲ್ಲಿ ರೇಬಿಸ್ ಜಾಗೃತಿ ಸಪ್ತಾಹ ಅಂಗವಾಗಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ದಂತ ವೈದ್ಯಾಧಿಕಾರಿಗಳಾದ ಡಾ. ಅಫ್ರೋಜ್ ಭಾನು ಅವರು, ರೇಬಿಸ್ ಒಂದು ಮಾರಕ ವೈರಸ್ ಸೋಂಕು ರೋಗವಾಗಿದ್ದು, ಹೆಚ್ಚಾಗಿ ನಾಯಿ, ಬೆಕ್ಕು ಹಾಗೂ ಇತರ ಪ್ರಾಣಿಗಳ ಕಚ್ಚುವಿಕೆಯಿಂದ ಹರಡುತ್ತದೆ ಎಂದು ತಿಳಿಸಿದರು. ಪ್ರಾಣಿಗಳ ಕಚ್ಚುವಿಕೆಯನ್ನು ನಿರ್ಲಕ್ಷಿಸದೆ ತಕ್ಷಣವೇ ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಚೆನ್ನಾಗಿ ತೊಳೆದು ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ



ಅಗತ್ಯ ಲಸಿಕೆ ಪಡೆಯಬೇಕು ಎಂದು ಹೇಳಿದರು. ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು, ರೇಬಿಸ್ ಒಂದು ಮಾರಕ ವೈರಸ್‌ಜನಿತ ರೋಗವಾಗಿದ್ದು, ಸೋಂಕಿತ ನಾಯಿ, ಬೆಕ್ಕು, ಕೋತಿ ಹಾಗೂ ಇತರ ಪ್ರಾಣಿಗಳ ಕಚ್ಚುವಿಕೆ ಅಥವಾ ಗೀರುವಿಕೆಯಿಂದ ಮನುಷ್ಯರಿಗೆ ಹರಡುತ್ತದೆ ಎಂದು ತಿಳಿಸಿದರು. ಅವರು ರೇಬಿಸ್ ರೋಗದ ಲಕ್ಷಣಗಳಾದ ಜ್ವರ, ತಲೆನೋವು, ದೌರ್ಬಲ್ಯ, ಕಚ್ಚಿದ ಸ್ಥಳದಲ್ಲಿ ನೋವು ಅಥವಾ ಉರಿ, ಆತಂಕ, ಉದ್ವೇಗ, ಗೊಂದಲ, ನೀರು ಕುಡಿಯಲು ತೊಂದರೆ (ಜಲಭೀತಿ), ಹೆಚ್ಚು ಜೊಲ್ಲು ಸು-ರಿಯುವುದು, ನುಂಗಲು ಕಷ್ಟವಾಗುವುದು, ಉಸಿರಾಟದ ತೊಂದರೆ, ಪಾರ್ಶ್ವವಾಯು ಹಾಗೂ ಪ್ರಜ್ಞಾಹೀನತೆ ಕುರಿತು ವಿವರಿಸಿದರು. ರೋಗ ತಡೆಗಟ್ಟುವ ಕುರಿತು ಮಾತನಾಡಿದ ಅವರು, ನಾಯಿ ಅಥವಾ ಇತರ ಪ್ರಾಣಿ ಕಚ್ಚಿದ ತಕ್ಷಣ ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಕನಿಷ್ಠ 15 ನಿಮಿಷಗಳ ಕಾಲ ಚೆನ್ನಾಗಿ ತೊಳೆಯಬೇಕು. ಗಾಯದ ಮೇಲೆ ಅರಿಶಿನ, ಎಣ್ಣೆ, ಸುಣ್ಣ ಅಥವಾ ಇತರ ಮನೆಮದ್ದುಗಳನ್ನು ಹಚ್ಚಬಾರದು. ತಕ್ಷಣ ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ರೇಬಿಸ್ ಲಸಿಕೆ ಪಡೆಯಬೇಕು. ಅಗತ್ಯವಿದ್ದಲ್ಲಿ ರೇಬಿಸ್ ಇಮ್ಯುನೊಗ್ಲೋಬುಲಿನ್ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಅಲ್ಲದೆ, ಸಾಕು ನಾಯಿಗಳು ಮತ್ತು ಬೆಕ್ಕುಗಳಿಗೆ ನಿಯಮಿತವಾಗಿ ರೇಬಿಸ್ ಲಸಿಕೆ ಹಾಕಿಸುವುದು, ಬೀದಿ ಪ್ರಾಣಿಗಳೊಂದಿಗೆ ಅನಗತ್ಯ ಸಂಪರ್ಕ ತಪ್ಪಿಸುವುದು ಹಾಗೂ ಮಕ್ಕಳಿಗೆ ಅಪರಿಚಿತ ಪ್ರಾಣಿಗಳೊಂದಿಗೆ ಆಟವಾಡದಂತೆ ತಿಳಿಸುವುದ-ರಿಂದ ರೇಬಿಸ್ ರೋಗವನ್ನು ಪರಿಣಾಮಕಾರಿಯಾಗಿ ತಡೆಗಟ್ಟಬಹುದು ಎಂದು ಹೇಳಿದರು. ರೇಬಿಸ್ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಪಾರ್ವತಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಉದಯಕುಮಾರ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆ ಸರಸ್ವತಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ಮರದ ನೆರಳಿನ ನೆನಪು

ಮರದ ನೆರಳಲಿ ಕುಳಿತ ಕ್ಷಣ,
ಮನದೊಳಗೆ ಮೂಡಿತು ಸಿಹಿ ನೆನಪು.
ಬಿಸಿಲಿನ ದಾರಿಯಲ್ಲಿ ತಂಪಾದ ನೆರಳು,
ನಮ್ಮ ಬಾಲ್ಯದ ಮಧುರ ಒಲವು.

ಎಲೆಗಳ ನಡುವೆ ಬೀಸಿದ ಗಾಳಿ,
ಹಳೆಯ ಕಥೆಗಳ ಹಾಡು ಹಾಡಿತು.
ಕೊಂಬೆಯ ಮೇಲಿನ ಹಕ್ಕಿಯ ಕೂಗು,
ಕಳೆದ ದಿನಗಳ ನೆನಪು ತಂದಿತು.

ಆ ಮರದ ಕೆಳಗೆ ಆಡಿದ ಆಟ,
ನಗುವಿನ ಧ್ವನಿ ಇನ್ನೂ ಕೇಳುತ್ತದೆ.
ಸ್ನೇಹಿತರ ಜೊತೆ ಕಳೆದ ಸಮಯ,
ಇಂದಿಗೂ ಹೃದಯದಲ್ಲಿ ಉಳಿದಿದೆ.

ಮಳೆಯ ಹನಿಗಳು ಎಲೆಗಳ ಮೇಲೆ,
ಮುತ್ತಿನಂತೆ ಹೊಳೆಯುತ್ತಿದ್ದವು.
ಮರದ ನೆರಳಿನ ತಂಪಿನೊಳಗೆ,
ನಮ್ಮ ಕನಸುಗಳು ಅರಳುತ್ತಿದ್ದವು.

ಕಾಲ ಬದಲಾದರೂ ನೆನಪು ಬದಲಾಗದು,
ಮರದ ನೆರಳು ಮನದಿಂದ ಮಾಯವಾಗದು.
ಆ ಮರದ ಕೆಳಗಿನ ಪ್ರತಿಕ್ಷಣವೂ,
ನನ್ನ ಬದುಕಿನ ಸಿಹಿ ನೆನಪಾಗುವುದು.

ಪೌಷ್ಟಿಕ ಆಹಾರ ಸೇವಿಸಿ ಆರೋಗ್ಯ ಕಾಪಾಡಿಕೊಳ್ಳಿ ಅಮರೇಶ ಹಾವಿನ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಗರ್ಭಿಣಿಯರು ಸಕಾಲದಲ್ಲಿ ಪೌಷ್ಟಿಕಾಂಶಯುಕ್ತ ಆಹಾರ ಸೇವಿಸುವ ಮೂಲಕ ತಮ್ಮ ಹಾಗೂ ಮಗುವಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಅಮರೇಶ ಹಾವಿನ ಹೇಳಿದರು.



ಪಟ್ಟಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 9ನೇ ಪೋಷಣೆ ಮಾಸಾಚರಣೆ ಅಭಿಯಾನದ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಅಂಗನವಾಡಿ ಕೇಂದ್ರಗಳ ಮೂಲಕ ಗರ್ಭಿಣಿಯರಿಗೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಪೌಷ್ಟಿಕ ಆಹಾರ ಹಾಗೂ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಾನಪದ ಕಲಾವಿದರ ಮೂಲಕ ಹಾಡುಗಳ ಮೂಲಕ ಅರಿವು ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಬಳಿಕ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ನೆರವೇರಿಸಿ, ಪೌಷ್ಟಿಕ ಆಹಾರದ ಕಿಟ್‌ಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಸಿಡಿಪಿಒ ಯಲ್ಲಮ್ಮ ಹಂಡಿ, ಪ್ರಭಾರ ವಲಯ ಮೇಲ್ವಿಚಾರಕಿಯರಾದ ನಾಗಮ್ಮ ಜಿ., ಬಸಮ್ಮ, ಅಂಗನವಾಡಿ ಕಾರ್ಯಕರ್ತೆ ಗಂಗಮ್ಮ ಹಾಗೂ ಕಲಾವಿದರಾದ ಪರಶುರಾಮ ಡಿ ಹಿರೇಮನಿ, ಸುಕುಮುನಿ ಗುಮಗೇರಿ, ವೆಂಕಟೇಶ ಹೊಸಮನಿ, ಚಿನ್ನಪ್ಪ ತಾವರಗೇರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪೌರಾಕಾರ್ಮಿಕ ಸುರೇಶ್ ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಜತೆ ಭೋಜನ ಸವಿಯುವ ಅವಕಾಶ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪ್ರತಿದಿನ ಬೆಳಗ್ಗೆ ಜನರು ಎಚ್ಚರಗೊಳ್ಳುವ ಮುನ್ನವೇ ನಗರದ ಸ್ವಚ್ಛತೆಗಾಗಿ ರಸ್ತೆಗೆ ಇಳಿಯುವ ಪೌರಕಾರ್ಮಿಕರ ಸೇವೆ ಬಹುತೇಕ ಕಣ್ಣಿಗೆ ಕಾಣದ ಶ್ರಮ. ಆದರೆ ಇದೇ ಸೇವೆಯನ್ನು ನಿಷ್ಠೆಯಿಂದ 25 ವರ್ಷಗಳ ಕಾಲ ಮುಂದುವರಿಸಿದಾಗ, ಆ ಪರಿಶ್ರಮಕ್ಕೆ ರಾಜ್ಯಮಟ್ಟದ ಗೌರವ ದೊರೆಯುತ್ತದೆ ಎಂಬುದಕ್ಕೆ ಲಿಂಗಸಗೂರಿನ ಪೌರಕಾರ್ಮಿಕ ಸುರೇಶ್ ತಂದೆ ದೇವಣ್ಣ ಅವರ ಬದುಕು ಸಾಕ್ಷಿಯಾಗಿದೆ.



ಕರ್ನಾಟಕ ರಾಜ್ಯ ಪೌರ ಸೇವಾ ನೌಕರರ ಸೇವಾ ಸಂಘ (ರಿ), ಬೆಂಗಳೂರು ವತಿಯಿಂದ ಸೆ.25. 2026ರಂದು ಬೆಂಗಳೂರಿನ ತ್ರಿಪುರ ವಾಸಿನಿ ಪ್ಯಾಲೇಸ್ ಗ್ರೌಂಡ್ ನಲ್ಲಿ ನಡೆದ 15ನೇ ವರ್ಷದ ರಾಜ್ಯಮಟ್ಟದ ಪೌರಕಾರ್ಮಿಕರ ದಿನಾಚರಣೆಯಲ್ಲಿ ಸುರೇಶ್ ಅವರನ್ನು ಅವರ ಸುದೀರ್ಘ ಸೇವೆಗಾಗಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸೇರಿದಂತೆ ವಿವಿಧ ಸಚಿವರು ಹಾಗೂ ಗಣ್ಯರು ಭಾಗವಹಿಸಿದ್ದರು. ನಗರಾಭಿವೃದ್ಧಿ ಇಲಾಖೆ ಹಾಗೂ ಪೌರಾಡಳಿತ ನಿರ್ದೇಶನಾಲಯದ ವತಿಯಿಂದ ಸುರೇಶ್ ಅವರಿಗೆ ಗೌರವ ಸಮರ್ಪಣಾ ಪತ್ರ ನೀಡಿ ಸನ್ಮಾನಿಸಲಾಯಿತು. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವಲ್ಲಿ ಅವರು ಸಲ್ಲಿಸಿದ ನಿಸ್ವಾರ್ಥ ಸೇವೆ, ಕರ್ತವ್ಯನಿಷ್ಠ ಶ್ರಮ ಹಾಗೂ ಸಮರ್ಪಣಾ ಮನೋಭಾವವನ್ನು ಗುರುತಿಸಿ ಈ ಗೌರವ ನೀಡಲಾಗಿದೆ.

ರಾಷ್ಟ್ರೀಯ ಬಾಸ್ಕೆಟ್‌ಬಾಲ್ ಚಾಂಪಿಯನ್‌ಶಿಪ್‌ಗೆ ಕಂಪ್ಲಿಯ ಜಿ. ಖುಷಿ ಆಯ್ಕೆ: ಗಂಗಮತ ಬೆಸ್ತ ಸಮಾಜದಿಂದ ಹಾರ್ದಿಕ ಅಭಿನಂದನೆ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ತಾಲೂಕಿನ ಗಂಗಮತ ಬೆಸ್ತ ಸಮಾಜದ ಹೆಮ್ಮೆಯ ಪುತ್ರಿಯಾದ ಕುಮಾರಿ ಜಿ. ಖುಷಿ ಅವರು 51ನೇ ಸಬ್ ಜೂನಿಯರ್ ರಾಷ್ಟ್ರೀಯ ಬಾಸ್ಕೆಟ್ ಬಾಲ್ ಚಾಂಪಿಯನ್‌ಶಿಪ್‌ಗೆ ಆಯ್ಕೆಯಾಗುವ ಮೂಲಕ ಕಂಪ್ಲಿ ತಾಲೂಕು ಹಾಗೂ ಸಮುದಾಯಕ್ಕೆ ಕೀರ್ತಿ ತಂದಿದ್ದಾರೆ.



ಕಂಪ್ಲಿ ತಾಲೂಕಿನ ಗ್ರಾಮೀಣ ಭಾಗದ ಪ್ರತಿಭೆಯಾದ ಜಿ. ಖುಷಿ ಅವರು ಕಠಿಣ ಪರಿಶ್ರಮ ಮತ್ತು ಕ್ರೀಡಾ ಕೌಶಲ್ಯದ ಮೂಲಕ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುವುದು ಇಡೀ ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ. ಇವರ ಈ ಅಪೂರ್ವ ಸಾಧನೆಯನ್ನು ಕಂಪ್ಲಿ ತಾಲೂಕು ಗಂಗಮತ ಬೆಸ್ತ ಸಮಾಜವು ಮುಕ್ತಕಂಠದಿಂದ ಶ್ಲಾಘಿಸಿದೆ. ಸಮಾಜದ ಅಧ್ಯಕ್ಷರ ಶುಭ ಹಾರೈಕೆ:ಜಿ.

ಖುಷಿ ಅವರ ಸಾಧನೆಗೆ ಹರ್ಷ ವ್ಯಕ್ತಪಡಿಸಿರುವ ಕಂಪ್ಲಿ ತಾಲೂಕು ಗಂಗಮತ ಸಮಾಜದ ಅಧ್ಯಕ್ಷರಾದ ಎಲಿಗಾರ್ ನಾಗರಾಜ್ ಅವರು, "ನಮ್ಮ ಸಮಾಜದ ಪುತ್ರಿ ರಾಷ್ಟ್ರ ಮಟ್ಟದ ಬಾಸ್ಕೆಟ್‌ಬಾಲ್ ಪಂದ್ಯಾವಳಿಗೆ ಆಯ್ಕೆಯಾಗಿರುವುದು ಅತ್ಯಂತ ಸಂತಸದ ವಿಷಯ. ಭಗವಂತನು ಆಕೆಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ನೀಡಿ ಆಶೀರ್ವದಿಸಲಿ. ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ ಜಿ. ಖುಷಿ ಅವರು ಅತ್ಯುತ್ತಮ ಪ್ರದರ್ಶನ ನೀಡಿ, ಅವರ ಸಾಧನೆಯ ಕೀರ್ತಿಯ ಕಿರೀಟ ಹೀಗೆಯೇ ನಿರಂತರವಾಗಿ ಮುಂದುವರೆಯಲಿ. ಮುಂಬರುವ ದಿನಗಳಲ್ಲಿ ಅವರು ದೇಶವನ್ನು ಪ್ರತಿನಿಧಿಸುವಂತಾಗಲಿ" ಎಂದು ತುಂಬು ಹೃದಯದಿಂದ ಹಾರೈಸಿದ್ದಾರೆ. ಸಮಾಜದ ಪದಾಧಿಕಾರಿಗಳು ಹಾಗೂ ಸಮಸ್ತರ ಪರವಾಗಿ ವಿಜೇತ ಕ್ರೀಡಾಪಟು ಜಿ. ಖುಷಿ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಗಿದ್ದು, ಮುಂದಿನ ಪಂದ್ಯಾವಳಿಗಳಿಗೆ ಶುಭ ಕೋರಲಾಗಿದೆ.

ಜಾಲಹಳ್ಳಿಯಲ್ಲಿ ಎನ್‌ಆರ್‌ಬಿಸಿ ಅವೈಜ್ಞಾನಿಕ ವಾರಬಂದಿ ವಿರೋಧಿಸಿ ಸೆ.30ರಂದು ಧರಣಿ

❏ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ನಾರಾಯಣಪುರ ಬಲದಂಡೆ ಕಾಲುವೆ (ಎನ್‌ಆರ್‌ಬಿಸಿ) ವ್ಯಾಪ್ತಿಯಲ್ಲಿ ಜಾರಿಗೊಳಿಸಿರುವ ಅವೈಜ್ಞಾನಿಕ ವಾರಬಂದಿ ಪದ್ಧತಿಯನ್ನು ವಿರೋಧಿಸಿ ಹಾಗೂ ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ನೀರು ಬಳಕೆದಾರರ ಸಂಘದ ಗ್ರಾಮ ಸಮಿತಿಗಳ ವತಿಯಿಂದ ಸೆ.30ರಂದು ಜಾಲಹಳ್ಳಿ ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ.

ಜಾಲಹಳ್ಳಿ ಪ್ರವಾಸಿ ಮಂದಿರದಲ್ಲಿ ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಗ್ರಾಮ ಸಮಿತಿ ಅಧ್ಯಕ್ಷ ಹನುಮಂತ ಮಡಿವಾಳ ಮಾತನಾಡಿ, ಎನ್‌ಆರ್‌ಬಿಸಿ ವ್ಯಾಪ್ತಿಯ ಅಚ್ಚುಕಟ್ಟು ಪ್ರದೇಶದ ರೈತರು ಕಾಲುವೆ ನೀರನ್ನು ನಂಬಿಕೊಂಡು ಮೆಣಸಿನಕಾಯಿ, ಹತ್ತಿ, ಭತ್ತ ಸೇರಿದಂತೆ ವಿವಿಧ



ಬೆಳೆಗಳನ್ನು ಬೆಳೆದಿದ್ದಾರೆ. ಮಳೆ ಕೊರತೆ ಹಾಗೂ ತೀವ್ರ ಬಿಸಿಲಿನಿಂದ ಭೂಮಿಯಲ್ಲಿ ತೇವಾಂಶದ ಕೊರತೆ ಉಂಟಾಗಿರುವ ಸಂದರ್ಭದಲ್ಲಿ ವಾರಬಂದಿ ಪದ್ಧತಿಯಿಂದ ಬೆಳೆಗಳಿಗೆ ತೀವ್ರ ಹಾನಿಯಾಗುವ ಸಾಧ್ಯತೆಯಿದೆ ಎಂದು ಹೇಳಿದರು.

ಪ್ರಸ್ತುತ ಜಾರಿಯಲ್ಲಿರುವ ವಾರಬಂದಿ ಪದ್ಧತಿಯನ್ನು ಕೂಡಲೇ ಸ್ಥಗಿತಗೊಳಿಸಿ, ಕಾಲುವೆಯ ಕೊನೆಯ ಭಾಗದ ರೈತರ ಜಮೀನುಗಳಿಗೂ ಸಮರ್ಪಕವಾಗಿ ನೀರು ತಲುಪಿಸುವ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು. ಅಲ್ಲದೆ, ರೈತರ ಪಂಪ್‌ಸೆಟ್‌ಗಳಿಗೆ ಹಗಲು ವೇಳೆಯಲ್ಲಿ 7 ಗಂಟೆಗಳ ಕಾಲ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಸಂಘಟನೆಗಳು ಆಗ್ರಹಿಸಿವೆ. ರೈತರ ಬೆಳೆಗಳನ್ನು ರಕ್ಷಿಸಲು ಕೂಡಲೇ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಕರ್ನಾಟಕ ಪ್ರಾಂತ ರೈತ ಸಂಘ ಹಾಗೂ ನೀರು ಬಳಕೆದಾರರ ಸಂಘದ ಮುಖಂಡರು ಎಚ್ಚರಿಕೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ನೀರು ಬಳಕೆದಾರರ ಸಂಘದ ಅಧ್ಯಕ್ಷ ಶಿವರಾಜ ಯರಕಮಟ್ಟಿ, ಕಾರ್ಯದರ್ಶಿ ಭೀಮಣ್ಣ ಡೆಂಗಿ, ಕರ್ನಾಟಕ ಪ್ರಾಂತ ರೈತ ಸಂಘದ ಅಧ್ಯಕ್ಷ ಹನುಮಂತ ಮಡಿವಾಳ, ಕಾರ್ಯದರ್ಶಿ ರಂಗನಾಥ ಬುಂಕಲದೊಡ್ಡಿ, ರೈತ ಮುಖಂಡರಾದ ಸಿದ್ದಪ್ಪ ಗುಮೇದಾರ, ದುರುಗಪ್ಪ ಹೊರಟ್ಟಿ, ನಂದಪ್ಪ ಮಡ್ಡಿ, ರಮೇಶ್ ಗಾಂಜಿ, ಮಲ್ಲೇಶ್ ರಾಂಪಳ್ಳಿ, ಶ್ರೀನಿವಾಸ ರೆಡ್ಡಿ, ಸಿದ್ದಯ್ಯ ಯರಕಮಟ್ಟಿ, ಮೌನೇಶ, ಮುದ್ದಯ್ಯ, ಶೇಜಣ್ಣ, ಸಿದ್ದಪ್ಪ ಹೊರಟ್ಟಿ, ಗುಡದಯ್ಯ ಕಟ್ಟೀಮನಿ ಹಾಗೂ ಕರವೇ ಮುಖಂಡರಾದ ತಮ್ಮಣ್ಣ ಹೆರುಂಡಿ, ಭೀಮಣ್ಣ ನಾಯಕ ಸೇರಿದಂತೆ ಪತ್ರಕರ್ತರು ಉಪಸ್ಥಿತರಿದ್ದರು.

ಅಗ್ನಿವೀರ್ ತರಬೇತಿಯಲ್ಲಿದ್ದ ಯುವಕ ರೈಲು ಅಪಘಾತದಲ್ಲಿ ಸಾವು

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ತಾಲೂಕಿನ ಮಡಕೇರಿ ಗ್ರಾಮದ ಯುವಕ ಹಾಗೂ ಅಗ್ನಿವೀರ್ ತರಬೇತಿಯಲ್ಲಿದ್ದ ಶಿವಪ್ಪ ಹನಮಪ್ಪ ಮುದಗಲ್ (24) ಅವರು ಮಹಾರಾಷ್ಟ್ರದ ಕಲ್ಯಾಣ್ ರೈಲ್ವೆ ನಿಲ್ದಾಣದಲ್ಲಿ ಸಂಭವಿಸಿದ ರೈಲು ಅಪಘಾತದಲ್ಲಿ ಮೃತಪಟ್ಟಿದ್ದಾರೆ.

ನಾಸಿಕ್‌ನಲ್ಲಿ ಸಶಸ್ತ್ರ ಪಡೆಗಳ ತರಬೇತಿ ಪಡೆಯುತ್ತಿದ್ದ ಶಿವಪ್ಪ ಅವರು ರಜೆ ನಿಮಿತ್ತ ಸ್ವಗ್ರಾಮಕ್ಕೆ ಮರಳುತ್ತಿದ್ದರು. ಕಲ್ಯಾಣ್ ರೈಲ್ವೆ ನಿಲ್ದಾಣದಲ್ಲಿ ರೈಲಿನಿಂದ ಇಳಿದು ಮತ್ತೊಂದು ಪ್ಲಾಟ್‌ಫಾರ್ಮ್‌ಗೆ ತೆರಳಲು ಹಳಿ ದಾಟುತ್ತಿದ್ದ ವೇಳೆ ಎದುರಿನಿಂದ ಬಂದ ರೈಲು ಢಿಕ್ಕಿ ಹೊಡೆದ



ಪರಿಣಾಮ ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ದೇಶಸೇವೆಯ ಕನಸಿನೊಂದಿಗೆ ಅಗ್ನಿವೀರ್ ತರಬೇತಿ ಪಡೆಯುತ್ತಿದ್ದ ಯುವಕನ ಆಕಸ್ಮಿಕ ನಿಧನದಿಂದ ಮಡಕೇರಿ ಗ್ರಾಮದಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದೆ. ಕುಟುಂಬದ ಆಧಾರವಾಗಿದ್ದ ಯುವಕನನ್ನು ಕಳೆದುಕೊಂಡಿರುವುದು ಕುಟುಂಬಸ್ಥರು ಹಾಗೂ ಗ್ರಾಮಸ್ಥರಿಗೆ ತುಂಬಲಾರದ ನಷ್ಟವಾಗಿದೆ.

ಶಿವಪ್ಪ ಅವರ ಪಾರ್ಥಿವ ಶರೀರವನ್ನು ಸ್ವಗ್ರಾಮಕ್ಕೆ ತರಲಾಗಿದ್ದು, ತಾಲೂಕು ಅಧಿಕಾರಿಗಳು ಹಾಗೂ ಉಪತಹಶೀಲ್ದಾರ್ ರಜನಿಕಾಂತ, ಶರಣಯ್ಯ ಹಿರೇಮಠ, ಬಿಜೆಪಿ ಮುಖಂಡ ಬಸವರಾಜ ಹಳ್ಳೂರ, ಕಾಂಗ್ರೆಸ್ ಮುಖಂಡ ದೊಡ್ಡಬಸನಗೌಡ ಪಾಟೀಲ, ಸಂಗನಗೌಡ ಜೈನರ, ಭರಂಗೌಡ ಸೇರಿದಂತೆ ಊರಿನ ಹಿರಿಯರು ಅಂತಿಮ ದರ್ಶನ ಪಡೆದರು. ಕುಷ್ಟಗಿ ತಾಲೂಕು ಮಾಜಿ ಸೈನಿಕರ ಸಂಘದ ಅಧ್ಯಕ್ಷ ಹಂಪನಗೌಡ ಬಳೂಟಗಿ, ಹನುಮಂತಪ್ಪ ಹಿರೇಮನಿ, ಶಂಕರಪ್ಪ ಕವಳಿಕಾಯಿ, ವಿಜಯ್, ಭೀಮಪ್ಪ ವಡ್ಡರ್, ಶಿವಾಜಿ ಹಡಪದ, ಕಳಕಪ್ಪ ನಾಯಕವಾಡಿ ಸೇರಿದಂತೆ ಹಲವರು ಅಂತಿಮ ದರ್ಶನ ಪಡೆದರು.

ಹನುಮಸಾಗರ ಪೊಲೀಸ್ ಇಲಾಖೆಯ ಎಎಸ್‌ಐ ಬಸಯ್ಯ ಹಿರೇಮಠ ಸೇರಿದಂತೆ ಅಧಿಕಾರಿಗಳು ಹಾಗೂ ಗ್ರಾಮಸ್ಥರ ಸಮ್ಮುಖದಲ್ಲಿ ಪಾರ್ಥಿವ ಶರೀರವನ್ನು ಮೆರವಣಿಗೆ ಮೂಲಕ ಕೊಂಡೊಯ್ದು ಸಕಲ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು. ಮೃತರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಹಾಗೂ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿ ಸಿಗಲಿ ಎಂದು ಗ್ರಾಮಸ್ಥರು ಹಾಗೂ ಮಾಜಿ ಸೈನಿಕರ ಸಂಘದ ಪದಾಧಿಕಾರಿಗಳು ಸಂತಾಪ ಸೂಚಿಸಿದರು.

"ನಾಯಿ ಕಚ್ಚಿದರೆ ನಿರ್ಲಕ್ಷ್ಯ ಬೇಡ, ತಕ್ಷಣ ಲಸಿಕೆ ಪಡೆಯಿರಿ: ಸಾಲಗುಂದದಲ್ಲಿ ವಿಶ್ವ ರೇಬಿಸ್ ಜಾಗೃತಿ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್

ಸಿಂದನೂರ್: ಜಿಲ್ಲಾಡಳಿತ ಜಿಲ್ಲಾ ಪಂಚಾಯತ್ ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಯಚೂರ್ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರ್ ಪ್ರಾಥಮಿಕ ಆರೋಗ್ಯ ಕೇಂದ್ರ ಸಾಲಗುಂದ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ರೇಬಿಸ್ ದಿನಾಚರಣೆಯ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಈ ಕಾರ್ಯಕ್ರಮವನ್ನು ಉದ್ದೇಶಿಸಿ ಡಾ. ಲಕ್ಷ್ಮಿ ವೈದ್ಯಾಧಿಕಾರಿಗಳು ಸಾಲಗುಂದಾ ಇವರು ಮಾತನಾಡಿ ಪ್ರತಿ ವರ್ಷ ಸೆಪ್ಟೆಂಬರ್ 28 ರಂದು ವಿಶ್ವ ರೇಬಿಸ್ ದಿನ (World Rabies Day) ವನ್ನು ಆಚರಿಸಲಾಗುತ್ತದೆ.

ರೇಬಿಸ್ ಲಸಿಕೆಯನ್ನು ಕಂಡುಹಿಡಿದ ವಿಜ್ಞಾನಿ ಲೂಯಿ ಪಾಶ್ಚರ್ ಅವರ ಪುಣ್ಯಸ್ಮರಣೆಯ ಅಂಗವಾಗಿ ಈ ದಿನವನ್ನು ವಿಶ್ವದೆಲ್ಲಡೆ ಆಚರಿಸಲಾಗುತ್ತದೆ. ರೇಬಿಸ್ ರೋಗದ ಬಗ್ಗೆ ಜಾಗೃತಿ ಮೂಡಿಸುವುದು ರೇಬಿಸ್ ಜಾಗೃತಿ ಸಪ್ತಾಹ (Week-long Campaign) ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತವೆ. ಸಪ್ತಾಹದ ಪ್ರಮುಖ ಕಾರ್ಯಕ್ರಮಗಳು ಮತ್ತು ಉದ್ದೇಶಗಳು: ಅರೇಬಿಸ್ ರೋಗದ ಲಕ್ಷಣಗಳು ಹೆಚ್ಚು ಜೊಲ್ಲು ಸುರಿವುದು ಜ್ವರ ನೀರಿನ ಭಯ ಗಾಳಿಯ ಭಯ ಸ್ಪಷ್ವವಾಗಿ ಯೋಚಿಸಲು



ಅಸಮರ್ಥತೆ ಮತ್ತು ಪ್ರಸ್ತುತವಾಗಿ ಮಾತನಾಡುವುದು ಇಂತಹ ಸಂದರ್ಭದಲ್ಲಿ ಮುನ್ನೆಚ್ಚರಿಕೆ ಕ್ರಮವಾಗಿ ಲಸಿಕೆಯನ್ನು ಪಡೆದುಕೊಳ್ಳಬೇಕು ಉಚಿತ ರೇಬಿಸ್ ನಿರೋಧಕ ಲಸಿಕಾ ಶಿಬಿರ (Anti-Rabies Vaccine Drive): ಸಾಕು ನಾಯಿಗಳು, ಬೆಕ್ಕುಗಳು ಹಾಗೂ ಬೀದಿ ನಾಯಿಗಳಿಗೆ ಉಚಿತ ರೇಬಿಸ್ ಲಸಿಕೆ ಹಾಕುವ ಅಭಿಯಾನ. ಬೀದಿ ನಾಯಿಗಳಿಗೆ ಸಂತಾನಶಕ್ತಿ ಹರಣ (ABC - Animal Birth Control) ಹಾಗೂ ಲಸಿಕೆ ನೀಡುವುದು. ಸಾರ್ವಜನಿಕರಲ್ಲಿ ಜಾಗೃತಿ ಹಾಗೂ ಶಾಲೆ-ಕಾಲೇಜುಗಳು, ಗ್ರಾಮೀಣ ಪ್ರದೇಶಗಳ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ರೇಬಿಸ್ ತಡೆಗಟ್ಟುವಿಕೆ ಕುರಿತು ಅರಿವು ಮೂಡಿಸುವುದು ಎಂದು ತಿಳಿಸಿದರು. ಶ್ರೀಮತಿ ಗೀತಾ ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು ಇವರು ಮಾತನಾಡಿ ಭಿತ್ತಿಪತ್ರ (ಕಠಣಜಡಿ) ಮತ್ತು ಕರಪತ್ರಗಳ ಮೂಲಕ ರೋಗದ ಗಂಭೀರತೆ ತಿಳಿಸುವುದು.

ಪ್ರಥಮ ಚಿಕಿತ್ಸಾ ಮಾಹಿತಿ ಶಿಬಿರ: ನಾಯಿ ಅಥವಾ ಯಾವುದೇ ಪ್ರಾಣಿ ಕಡಿದ ತಕ್ಷಣ ಗಾಯವನ್ನು ಸಾಬೂನು ಮತ್ತು ಹರಿಯುವ ನೀರಿನಿಂದ ಕನಿಷ್ಠ 10 ರಿಂದ 15 ನಿಮಿಷಗಳ ಕಾಲ ತೊಳೆಯುವ ಪ್ರಾಮುಖ್ಯತೆಯನ್ನು ತಿಳಿಸಿಕೊಡುವುದು. ನಾಟಿ ವೈದ್ಯ, ಅರಿಶಿನ ಅಥವಾ ಖಾರದ ಪುಡಿ ಹಚ್ಚುವುದನ್ನು ತಡೆದು, ತಕ್ಷಣವೇ ಸರ್ಕಾರಿ ಆಸ್ಪತ್ರೆಗೆ ತೆರಳಿ 'ಆಂಟಿ-ರೇಬಿಸ್ ವ್ಯಾಕ್ಸಿನ್' (ARV) ಪಡೆಯಲು ಉತ್ತೇಜಿಸುವುದು ರೇಬಿಸ್ ಕುರಿತು ನೆನಪಿನಲ್ಲಿಡಬೇಕಾದ ಪ್ರಮುಖ ಅಂಶಗಳು:

ಕಾರಣ: ರೇಬಿಸ್ ಒಂದು ಪ್ರಾಣಿಜನ್ಯ ವೈರಲ್ ಕಾಯಿಲೆಯಾಗಿದ್ದು (Lyssavirus), ರೇಬಿಸ್ ಪೀಡಿತ ನಾಯಿ, ಬೆಕ್ಕು, ಕೋತಿ ಮುಂತಾದ ಪ್ರಾಣಿಗಳ ಕಡಿತ ಅಥವಾ ಗಾಯಕ್ಕೆ ಲಾಲಾರಸ ತಗಲುವುದರಿಂದ ಹರಡುತ್ತದೆ.

ತಡೆಗಟ್ಟುವಿಕೆ: ರೇಬಿಸ್‌ಗೆ ಸೂಕ್ತ ಚಿಕಿತ್ಸೆ ಇಲ್ಲ, ಆದರೆ ಲಸಿಕೆ (Vaccination) ಮೂಲಕ ಇದನ್ನು ಸಂಪೂರ್ಣವಾಗಿ ತಡೆಗಟ್ಟಬಹುದು.

ಧ್ಯೇಯ: ವಿಶ್ವ ಆರೋಗ್ಯ ಸಂಸ್ಥೆಯ (WHO) ಪ್ರಕಾರ 2030ರ ವೇಳೆಗೆ "ನಾಯಿ ಕಡಿತದಿಂದ ಬರುವ ರೇಬಿಸ್ ಮುಕ್ತ ಜಗತ್ತು" ನಿರ್ಮಿಸುವುದು ಪ್ರಮುಖ ಗುರಿಯಾಗಿದೆ. ಎಂದು ತಿಳಿಸಲಾಯಿತು. ಈ ಕಾರ್ಯಕ್ರಮದಲ್ಲಿ ಕೆ ಎಸ್ ಬೈರಮಟ್ಟಿ ಸೀನಿಯರ್ ಪಿಎಚ್‌ಇಓ, ಸರಸ್ವತಿ ವಿಜಯಲಕ್ಷ್ಮಿ ಅಂಬಮ್ಮ PHCO ರವರು, ಹನುಮಂತರೆಡ್ಡಿ, ಸೈಫ್ ಖಾನ್ HIO ರವರು, ರವಿ ನಾಯಕ್ ಪ್ರಸನ್ನ ಕುಮಾರ್ ರೆಡ್ಡಪ್ಪ ಗೌಡ ಸಂತೋಷ್ CHO ರವರು, ಪ್ರಸಾದ್ ಕುಮಾರ್ ಫಾರ್ಮಸಿ ಅಧಿಕಾರಿಗಳು, ಪಾಲಾಕ್ಷ ರೆಡ್ಡಿ LTO, ರಾಧಾ S/N, ಅನ್ನಪೂರ್ಣ ಫಾತಿಮಾ ಲಕ್ಷ್ಮಿ ಹಜರಬೇಗಂ ಆಶಾ ಕಾರ್ಯಕರ್ತೆಯರು, ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಶ್ರೀ ಹೂಗಾರ ಮಾದಯ್ಯನವರ ಜಯಂತಿ ಸರಳವಾಗಿ ಆಚರಣೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: 12ನೇ ಶತಮಾನದ ವಿಶ್ವಗುರು ಬಸವಣ್ಣನವರ ಸಮಕಾಲೀನರಾದ ಶ್ರೀ ಹೂಗಾರ ಮಾದಯ್ಯನವರ ಜಯಂತಿಯನ್ನು ಸಿಂಧನೂರು ನಗರದ ಕೋಟೆ ಈರಣ್ಣ ದೇವಸ್ಥಾನದಲ್ಲಿ ಶನಿವಾರ ಸರಳವಾಗಿ ಹಾಗೂ ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.

ಜಯಂತಿ ಅಂಗವಾಗಿ ಶ್ರೀ ಹೂಗಾರ ಮಾದಯ್ಯನವರನ್ನು ಸ್ಮರಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕ ಅಮರೇಶ್ ಹೂಗಾರ್, ಶರಣರು ಪ್ರತಿಪಾದಿಸಿದ ಕಾಯಕ, ದಾಸೋಹ, ಸಮಾನತೆ ಮತ್ತು ಮಾನವೀಯತೆಯ ಮೌಲ್ಯಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಹೇಳಿದರು.

12ನೇ ಶತಮಾನದಲ್ಲಿ ಬಸವಣ್ಣನವರ ನೇತೃತ್ವದಲ್ಲಿ ನಡೆದ ಶರಣ ಚಳವಳಿಯು ಸಮಾಜದಲ್ಲಿ ಸಮಾನತೆ, ಕಾಯಕದ ಘನತೆ, ದಾಸೋಹ ಹಾಗೂ ಮಾನವೀಯ ಮೌಲ್ಯಗಳಿಗೆ



ಹೆಚ್ಚಿನ ಮಹತ್ವ ನೀಡಿತ್ತು. ಈ ಶರಣ ಪರಂಪರೆಯಲ್ಲಿ ಶ್ರೀ ಹೂಗಾರ ಮಾದಯ್ಯನವರ ಕೊಡುಗೆ ಹಾಗೂ ಅವರ ಆದರ್ಶಗಳು ಸ್ಮರಣೀಯವಾಗಿವೆ ಎಂದು ಅವರು ಹೇಳಿದರು.

ಶರಣರು ಸಾರಿದ ವಿಚಾರಧಾರೆ ಯಾವುದೇ ಒಂದು ಸಮುದಾಯಕ್ಕೆ ಸೀಮಿತವಾಗಿರದೆ ಇಡೀ ಸಮಾಜಕ್ಕೆ ಮಾರ್ಗದರ್ಶನ ನೀಡುವಂತಹದ್ದಾಗಿದೆ. ಇಂದಿನ ಯುವಜನತೆ ಶರಣರ ಜೀವನ, ವಚನ ಪರಂಪರೆ ಹಾಗೂ ಸಾಮಾಜಿಕ ಚಿಂತನೆಗಳನ್ನು ಅರಿತುಕೊಂಡು, ಅವುಗಳಲ್ಲಿರುವ ಉತ್ತಮ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅಮರೇಶ್ ಹೂಗಾರ್ ಕರೆ ನೀಡಿದರು.

ಹೂಗಾರ ಸಮಾಜವು ತನ್ನ ಇತಿಹಾಸ, ಪರಂಪರೆ ಹಾಗೂ ಮಹನೀಯರ ಕೊಡುಗೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ನಿರಂತರವಾಗಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಸಮಾಜದ ಮಕ್ಕಳಿಗೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವುದರ ಜೊತೆಗೆ, ಯುವಕರಲ್ಲಿ ಸಾಮಾಜಿಕ ಜಾಗೃತಿ ಮೂಡಿಸಿ ಸಂಘಟನೆ ಮತ್ತು ಒಗ್ಗಟ್ಟನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶರಣಪ್ಪ ಹೂಗಾರ ಕೆ. ಹಂಚಿನಾಳ, ವೀರಶೈವ ಲಿಂಗಾಯತ ಸಮಾಜದ ಕಾರ್ಯಕಾರಿಣಿ ನೂತನ ಸದಸ್ಯರು; ಲಿಂಗರಾಜ ಹೂಗಾರ್ ಗೊರೇಬಾಳ, ಅಖಿಲ ಕರ್ನಾಟಕ ಹೂಗಾರ್ ಮಹಾಸಭಾ ರಾಜ್ಯ ಉಪಾಧ್ಯಕ್ಷರು; ಗಂಗಾಧರ ಹೂಗಾರ ಗೊರೇಬಾಳ, ಅಖಿಲ ಭಾರತ ವೀರಶೈವ ಸಮಾಜದ ಸದಸ್ಯರು; ಜಡಿಯಪ್ಪ ಹೂಗಾರ, ವಕೀಲರು; ಅಮರೇಶ್ ಹೂಗಾರ್, ಶಿಕ್ಷಕರು; ಶ್ರೀರಂಗನಾಥ ಹೂಗಾರ್; ಲಿಂಗರಾಜ ಹೂಗಾರ್ ಕೆ. ಹಂಚಿನಾಳ; ಮಲ್ಲಿಕಾರ್ಜುನ ಹೂಗಾರ್ ಗುಳ್ಳೆಮ್; ಸೋಮನಾಥ ಹೂಗಾರ್ ಹಾಗೂ ಭೀಮಣ್ಣ ಹೂಗಾರ್, ಅಧ್ಯಕ್ಷರು, ಹೂಗಾರ ಸಮಾಜ ಸಿಂಧನೂರು, ಉಪಸ್ಥಿತರಿದ್ದರು.

ವಿಶೇಷವಾಗಿ ಸಿಂಧನೂರು ತಾಲೂಕು ವೀರಶೈವ ಲಿಂಗಾಯತ ಸಮಾಜದ ನೂತನ ಅಧ್ಯಕ್ಷರಾದ ರಾಜಶೇಖರ್ ಪೊಲೀಸ್ ಪಾಟೀಲ್ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀ ಹೂಗಾರ ಮಾದಯ್ಯನವರ ಜಯಂತಿಗೆ ಗೌರವ ಸಲ್ಲಿಸಿದರು. ಅಮರೇಶ್ ಸಾಹುಕಾರ್, ರವಿಕುಮಾರ್ ಪನ್ನೂರು ಹಾಗೂ ಬಸವಲಿಂಗಪ್ಪ ಬಾದರ್ಲಿ ಸೇರಿದಂತೆ ಸಮಾಜದ ಗಣ್ಯರು ಉಪಸ್ಥಿತರಿದ್ದರು.

ಸಿಂಧನೂರು ತಾಲೂಕು ಹೂಗಾರ ಸಮಾಜದ ಗುರು-ಹಿರಿಯರು, ಸಮಾಜದ ಮುಖಂಡರು, ಯುವಕರು, ಮಹಿಳೆಯರು ಹಾಗೂ ಬಂಧು-ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಸರಳವಾಗಿ ಆಯೋಜಿಸಲಾಗಿದ್ದ ಜಯಂತಿ ಕಾರ್ಯಕ್ರಮವು ಶ್ರೀ ಹೂಗಾರ ಮಾದಯ್ಯನವರ ಆದರ್ಶಗಳ ಸ್ಮರಣೆ, ಶರಣ ಪರಂಪರೆಯ ಮೇಲಿನ ಗೌರವ ಹಾಗೂ ಸಮಾಜದ ಒಗ್ಗಟ್ಟಿನ ಸಂದೇಶವನ್ನು ಸಾರುವ ಮೂಲಕ ಅರ್ಥಪೂರ್ಣವಾಗಿ ನಡೆಯಿತು.

ನೇಮಕಾತಿ ಪ್ರಕಟಣೆ

ICSIL Recruitment 2026 – 27 ಆಇಔ, ಒಖಖ ಹುದ್ದೆಗಳ ನೇಮಕಾತಿ

ICSIL Recruitment 2026: Intelligent Communication Systems India Limited (ICSIL) ಸಂಸ್ಥೆಯು ಆಇಔ (Data Entry Operator) ಮತ್ತು ಒಖಖ (Multi-Tasking Staff) ಹುದ್ದೆಗಳಿಗೆ ಒಟ್ಟು 27 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿ ಆಹ್ವಾನಿಸಿದೆ. ದೆಹಲಿ ನವದೆಹಲಿಯಲ್ಲಿ ಸರ್ಕಾರಿ ಉದ್ಯೋಗ ಹುಡುಕುತ್ತಿರುವ ಅರ್ಹ ಅಭ್ಯರ್ಥಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು 01–ಅಕ್ಟೋಬರ್–2026 ರಂದು ನಡೆಯುವ Walk-in Interview ಗೆ ಹಾಜರಾಗಬಹುದು. ಸಂಸ್ಥೆಯ ಅಧಿಕೃತ ಅಧಿಸೂಚನೆಯ ಪ್ರಕಾರ ಅರ್ಹತೆ, ವಯೋಮಿತಿ, ವೇತನ ಹಾಗೂ ಇತರ ವಿವರಗಳನ್ನು ಪರಿಶೀಲಿಸಿ ಸಂದರ್ಶನಕ್ಕೆ ಹಾಜರಾಗಬೇಕು. ಅಧಿಕೃತ ವೆಬ್‌ಸೈಟ್: icsil.in

ಕಾರುಣ್ಯ ಆಶ್ರಮದಲ್ಲಿ ಪಿಕೇಟಿ ಕುಟುಂಬದಿಂದ ನಿಮ್ಮೊಂದಿಗೆ ನಾವಿದ್ದೇವೆ ಎನ್ನುವ ವಿಶೇಷ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್



ಸಿಂಧನೂರು: ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಸಿಂಧನೂರು ಪಿ.ಡಬ್ಲ್ಯೂ.ಡಿ. ಕ್ಯಾಂಪಿನ ಪಿಕೇಟಿ ಶ್ರೀನಿವಾಸ ಅವರ ದ್ವಿತೀಯ ವರ್ಷದ ಪುಣ್ಯರಾಧನೆ ಕಾರ್ಯಕ್ರಮವನ್ನು "ನಿಮ್ಮೊಂದಿಗೆ ನಾವಿದ್ದೇವೆ" ಎನ್ನುವ ವಿಶೇಷ ಕಾರ್ಯಕ್ರಮದಡಿಯಲ್ಲಿ ಆಶ್ರಮದಲ್ಲಿ ಇಡೀ ದಿನ ಮಹಾಪ್ರಸಾದ ಸೇವೆ ಹಾಗೂ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಕಾರ್ಯಕ್ರಮ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಪಿಕೇಟಿ ಕುಟುಂಬದ ಹಿರಿಯರಾದ ಪಿ.ಲಕ್ಷ್ಮಿ ಅವರನ್ನು ಹಾಗೂ ಆಂಧ್ರಪ್ರದೇಶದ ಕರ್ನೂಲು ನಗರದ ಶ್ರಾವಣಿ ಪ್ರದೀಪ್ ದಂಪತಿಗಳನ್ನು ಆಶ್ರಮದ ವತಿಯಿಂದ ಗೌರವಿಸಿ ಆಶೀರ್ವದಿಸಲಾಯಿತು. ಈ ಕಾರ್ಯಕ್ರಮದಲ್ಲಿ ಪಿ. ಕಾರ್ತಿಕ್ ಮಾತನಾಡಿ ನಮ್ಮ ಮಾನವೀಯತೆಯ ಮೌಲ್ಯಗಳನ್ನು ಅರಿತುಕೊಳ್ಳಬೇಕಾದರೆ ಒಮ್ಮೆ ಕಾರುಣ್ಯ ಆಶ್ರಮಕ್ಕೆ ಭೇಟಿ ನೀಡಿ ಈ ಆಶ್ರಮದಲ್ಲಿರುವ ಮಾನವ ಜೀವಿಗಳು ಕುಟುಂಬದಿಂದ ತಿರಸ್ಕೃತಗೊಂಡು ಹಲವಾರು ಅಪಘಾತಗಳಿಂದ ಕುಟುಂಬಗಳನ್ನು ಕಳೆದುಕೊಂಡು ಹಲವಾರು ನೋವುಗಳ ಮಧ್ಯೆ ಕಾರುಣ್ಯ ಕುಟುಂಬದಲ್ಲಿ ಸುಂದರ ಬದುಕು ಕಂಡುಕೊಳ್ಳುತ್ತಿದ್ದಾರೆ.

ಇಂತಹವರನ್ನು ಈ ಆಶ್ರಮದ ಸಂಸ್ಥಾಪಕರಾದ ವೇದಮೂರ್ತಿ ಅಮರಯ್ಯ ಸ್ವಾಮಿ ಅವರು ತಮ್ಮ ಜೋಳಿಗೆಯ ಕಾಯಕದೊಂದಿಗೆ ಪಾಲನೆ ಪೋಷಣೆ ಮಾಡುತ್ತಿರುವುದು. ಸಮಾಜಕ್ಕೆ ಆದರ್ಶ ಕಾರ್ಯವಾಗಿದೆ. ಇಂತಹ ಕಾರ್ಯಗಳನ್ನು ಟೀಕೆ ಟಿಪ್ಪಣಿ ಮಾಡುವವರೇ ಈ ಕಾರ್ಯಕ್ಕೆ ಸ್ಫೂರ್ತಿಯಾಗಿದ್ದಾರೆ. ಮನೆಯಲ್ಲಿರುವ ಒಬ್ಬಿಬ್ಬ ವಯಸ್ಸಾದವರನ್ನು ನೋಡಿಕೊಳ್ಳಲಾರದಂತಹ ಸ್ಥಿತಿಯಲ್ಲಿ ಸುಮಾರು 65ಕ್ಕೂ ಹೆಚ್ಚು ದರು ಹಾಗೂ ವಯಸ್ಕರ ಬುದ್ಧಿಮಾಂದ್ಯರನ್ನು ತಮ್ಮ ಎಲ್ಲ ಸ್ವಾಭಿಮಾನವನ್ನು ಒತ್ತೆ ಇಟ್ಟು ಹರೇಟನೂ–ರಿನ ಹಿರೇಮಠದ ಕುಟುಂಬ ಮಾಡುತ್ತಿರುವ ಈ ಕಾರ್ಯಕ್ಕೆ ನಮ್ಮ ಕುಟುಂಬದಿಂದ ಮತ್ತು ನಮ್ಮ ಸಮಾಜದ ವತಿಯಿಂದ ಅನಂತ ಕೋಟಿ ಕೋಟಿ ಪ್ರಣಾಮಗಳು. ಇಂದು ನನ್ನ ತಂದೆಯವರಾದ ಶ್ರೀನಿವಾಸ ಅವರು ಹಾಕಿಕೊಟ್ಟ ಮಾರ್ಗ ಅವರು ನಮ್ಮನ್ನು ಬೆಳೆಸಿದ ರೀತಿ ಅವರ ಆದರ್ಶದಂತೆ ನಾವು ಬದುಕುತ್ತಿದ್ದೇವೆ.

ಸಮಾಜದಲ್ಲಿರುವ ಹಿರಿಯರನ್ನು ಗೌರವಿಸಿ ಪ್ರೀತಿಸಿ ಪೂಜಿಸಿದಾಗ ಮಾತ್ರ ನಮ್ಮ ಭಾರತೀಯ ಸಂಸ್ಕಾರ ಸಂಸ್ಕೃತಿ ಉಳಿಯಲು ಸಾಧ್ಯ ಕಾರುಣ್ಯ ಆಶ್ರಮದ ಯಾವುದೇ ಕಷ್ಟದ ದಿನಗಳಲ್ಲಿ ನಮ್ಮ ಕೈಯಿಂದಾದಂತಹ ಸಹಾಯ ಮಾಡುವಂತಹ ಕಾರ್ಯ ನಮ್ಮ ಕುಟುಂಬ ಮಾಡುತ್ತದೆ. ಕಾರುಣ್ಯ ಆಶ್ರಮದ ಬದುಕಿಗಾಗಿ ಸದಾವಕಾಲ ನಮ್ಮ ಮನೆಯ ಬಾಗಿಲು ತೆರೆದಿರುತ್ತದೆ ಎಂದು ಭಾವನಾತ್ಮಕವಾಗಿ ಮಾತನಾಡಿ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿ ಹಲವಾರು ಅನಿಸಿಕೆಗಳನ್ನು ಹಂಚಿಕೊಂಡರು. ಈ ಕಾರ್ಯಕ್ರಮದಲ್ಲಿ ವಾಸು ಪಗಡದಿನ್ನಿ ಕ್ಯಾಂಪ್. ಪಿ. ಲಕ್ಷ್ಮೀ. ಬಿ.ಲಕ್ಷ್ಮಿ ಪದ್ಮಸಾಯಿ. ಶ್ರಾವಣಿ.ಪ್ರದೀಪ್. ಲಕ್ಷ್ಮಿ ಬಸವರಾಜ. ವಿಜಯಲಕ್ಷ್ಮಿ ನಾಗಪ್ಪ. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ ಮರಿಯಪ್ಪ. ಜ್ಯೋತಿ. ಮಹಾಂತೇಶ ದೋಟಿಹಾಳ. ಶರಣು ಸ್ವಾಮಿ ಬಸವ ಸ್ವಾಮಿ. ಹಾಗೂ ಪಿಕೇಟಿ ಕುಟುಂಬದ ಹಲವಾರು ಗುರು ಹಿರಿಯರುಗಳು ಭಾಗವಹಿಸಿದ್ದರು.

ವಿದ್ಯಾರತ್ನ ರಾಜ್ಯ ಪ್ರಶಸ್ತಿಗೆ ಭಾಜನರಾದ ಡಾ. ಲವಕುಮಾರ ಇ. ಹಾಗೂ ಶಿಕ್ಷಕಿ ನಂದಿನಿ

❏ ನೈಜ್ಯ ದೆಸೆ ನ್ಯೂಸ್

ದಾವಣಗೆರೆ: ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಸ್ಕೃತಿ ಮತ್ತು ಸಾಹಿತ್ಯ ಪರಿಷತ್ತು ಬೆಂಗಳೂರು ಹಾಗೂ ಜಿಲ್ಲಾ ಘಟಕ ದಾವಣಗೆರೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾದ ರಾಜ್ಯಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ರಾಯಚೂರು ಜಿಲ್ಲೆಯ ಇಬ್ಬರು ಶಿಕ್ಷಕರಿಗೆ ವಿದ್ಯಾರತ್ನ ರಾಜ್ಯ ಪ್ರಶಸ್ತಿ ಲಭಿಸಿದೆ.



ಸಿಂಧನೂರು ತಾಲ್ಲೂಕಿನ ಸರ್ಕಾರಿ ಪದವಿ ಮಹಾವಿದ್ಯಾಲಯದ ಡಾ. ಲವಕುಮಾರ ಇ. ಹಾಗೂ ರಾಯಚೂರು ತಾಲ್ಲೂಕಿನ ಯರಮರಸ್ ಶಾಲೆಯ ಶಿಕ್ಷಕಿ ಶ್ರೀಮತಿ ನಂದಿನಿ ಅವರು ವಿದ್ಯಾರತ್ನ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಸಲ್ಲಿಸಿರುವ ಸೇವೆಯನ್ನು ಪರಿಗಣಿಸಿ ಇವರನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಸ್ಕೃತಿ ಮತ್ತು ಸಾಹಿತ್ಯ ಪರಿಷತ್ತು ರಾಯಚೂರು ಜಿಲ್ಲಾ ಘಟಕದ ಅಧ್ಯಕ್ಷರಾದ ರವಿ ಬಿ. ಸಾಸಲಮರಿ ಅವರು ತಿಳಿಸಿದ್ದಾರೆ. ಈ ಒಂದು ಕಾರ್ಯಕ್ರಮದಲ್ಲಿ ಪರಿಷತ್ತಿನ ಗೌರವಾಧ್ಯಕ್ಷರಾದ ಡಾ.ವೆಂಕಟನಾರಾಯಣ ಮಿರಿಯಂ, ಜಂಟಿ ಕಾರ್ಯದರ್ಶಿ ಶ್ರೀಮತಿ ವೈಶಾಲಿ ಪಾಟೀಲ್, ಹಿರಿಯರಾದ ಶ್ರೀ ತಿರುಪತಿ ವಡ್ಡಿ ಗುಡದೂರು, ಸ್ನೇಹಿತರಾದ ಶಿವರಾಜ ಅಡಗಲ್, ಖಾಸಿಂ ಖುರೇಷಿ ದಿದ್ದಗಿ, ನಿರುಪಾದಿ ಅಂಕುಶ ದೊಡ್ಡಿ, ರುದ್ರಗೌಡ ಮಾವಿನಮಡ್ಡು, ಆನಂದಕುಮಾರ್ ಹಾಗೂ ಇತರರು ಭಾಗವಹಿಸಿದ್ದರು.

ಕುಷ್ಟಗಿ ತಾಲೂಕಿನ ಇಬ್ಬರು ಪತ್ರಕರ್ತರಿಗೆ ಕೆಯುಡಬ್ಲ್ಯೂಜೆ ಪ್ರಶಸ್ತಿ ಪ್ರಧಾನ

❏ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಜಿಲ್ಲಾ ಘಟಕದ ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಯಲಬುರ್ಗಾದ ಬುದ್ಧ, ಬಸವ, ಅಂಬೇಡ್ಕರ್ ಭವನದಲ್ಲಿ ನಡೆದ ಜಿಲ್ಲಾ ಪತ್ರಿಕಾ ದಿನಾಚರಣೆ ಹಾಗೂ ದತ್ತಿನಿಧಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕುಷ್ಟಗಿ ತಾಲೂಕಿನ ಇಬ್ಬರು ಪತ್ರಕರ್ತರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.



ಕನ್ನಡ ಪ್ರಭ ಪತ್ರಿಕೆಯ ಕುಷ್ಟಗಿ ತಾಲೂಕು ವರದಿಗಾರ ಪರಶಿವಮೂರ್ತಿ ಮಾಟಲದಿನ್ನಿ ಅವರಿಗೆ ವಾರ್ಷಿಕ ಉತ್ತಮ ವರದಿಗಾರ ಪ್ರಶಸ್ತಿ ಹಾಗೂ ಸಂಯುಕ್ತ ಕರ್ನಾಟಕ ಪತ್ರಿಕೆಯ ವರದಿಗಾರ ಪ್ರಸನ್ನ ದೇಸಾಯಿ ನವಲಹಳ್ಳಿ ಅವರಿಗೆ ಜಿಲ್ಲಾ ಉತ್ತಮ ವರದಿಗಾರ ಪ್ರಶಸ್ತಿ ಪ್ರದಾನ ಮಾಡಲಾಯಿತು. ಹಲವು ವರ್ಷಗಳಿಂದ ಪತ್ರಿಕೋದ್ಯಮದಲ್ಲಿ ಸೇವೆ ಸಲ್ಲಿಸುತ್ತಿರುವ ಇಬ್ಬರೂ ಪತ್ರಕರ್ತರು ಉತ್ತಮ ವರದಿಗಾರಿಕೆ, ಪರಿಣಾಮಕಾರಿ ಬರಹ ಹಾಗೂ ಪತ್ರಿಕಾ ಕ್ಷೇತ್ರಕ್ಕೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಸಮಾರಂಭದಲ್ಲಿ ಸಚಿವ ಬಸವರಾಜ ರಾಯರೆಡ್ಡಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ರಾಜ್ಯ ಪ್ರಧಾನ ಕಾರ್ಯದರ್ಶಿ ಲೋಕೇಶ, ಕೊಪ್ಪಳ ಜಿಲ್ಲಾಧ್ಯಕ್ಷ ಹನುಮಂತ ಹಳ್ಳಿಕೇರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ ವೈ., ರಾಜ್ಯ ಸಮಿತಿ ಸದಸ್ಯ ವೀರಣ್ಣ ಕಳ್ಳಿಮನಿ, ಉಪಾಧ್ಯಕ್ಷ ರಾಜು ಬಿ.ಆರ್., ಯಲಬುರ್ಗಾ ತಾಲೂಕಾಧ್ಯಕ್ಷ ಮಲ್ಲು ಮಾಟರಂಗಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಪದಾಧಿಕಾರಿಗಳು ಮತ್ತು ಜಿಲ್ಲೆಯ ಪತ್ರಕರ್ತರು ಉಪಸ್ಥಿತರಿದ್ದರು.

ಸರ್ಕಾರದ ಯೋಜನೆಗಳನ್ನು ಜನತೆಗೆ ತಲುಪಿಸುವುದು ಅತಿಮುಖ್ಯ : ತಹಶೀಲ್ದಾರ್ ಜೂಗಲ್ ಮಂಜುನಾಯಕ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಜನರ ಅಹವಾಲುಗಳು, ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲಿ ಪರಿಹರಿಸಿ, ಸರ್ಕಾರದ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ಮುಟ್ಟಿಸುವ ನಿಟ್ಟಿನಲ್ಲಿ ಪ್ರಜಾಸೇವಾ ಆಂದೋಲನವನ್ನು ಸರ್ಕಾರ ಜಾ–ರಿಗೆ ತಂದಿದೆ ಎಂದು ತಹಶೀಲ್ದಾರ್ ಜೂಗಲ್ ಮಂಜುನಾಯಕ ಹೇಳಿದರು.

ತಾಲೂಕಿನ ಸಣಾಪುರ ಗ್ರಾಮದ ಉದ್ಭವ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ತಾಲೂಕು ಆಡಳಿತದ ನೇತೃತ್ವದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರಜಾಸೇವಾ ಆಂದೋಲನಾ ಸಭೆಯಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿ, ಗೃಹ ಲಕ್ಷ್ಮಿ, ಪಿಂಚಣಿ, ವೃದ್ಧಾಪ್ಯ ಯೋಜನೆ, ಜಾತಿ ಪ್ರಮಾಣ, ಜೆಸ್ಕಾಂ ಸೇರಿದಂತೆ ಇನ್ನಿತರ ಯೋಜನೆಗಳಿಗೆ ಸಂಬಂಧಿಸಿದಂತೆ ಜನರ ಸಮಸ್ಯೆಗಳನ್ನು ಆಲಿಸಿ, ಪರಿಹರಿಸಲಾಗುವುದು. ತಾಲೂಕು ಮಟ್ಟದ ಅಧಿಕಾರಿಗಳು ಪ್ರತಿಯೊಬ್ಬ ಜನರ ಸಮಸ್ಯೆಗಳ ಅರ್ಜಿಗಳಿಗೆ ಸಕಾಲದಲ್ಲಿ ವಿಲೇವಾರಿ ಮಾಡಿ, ಅವರ ನೆಮ್ಮದಿಯ ಬದುಕಿಗೆ ಅವಕಾಶ ಮಾಡಿಕೊಡುವ ಜೊತೆಗೆ ಸರ್ಕಾರದ ಯೋಜನೆಗಳನ್ನು ತಲುಪಿಸುವುದು ಅತಿಮುಖ್ಯವಾಗಿದೆ.

ಈ ಪ್ರಜಾಸೇವಾ ಆಂದೋಲನಾದ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ನಂತರ ವೇದಿಕೆ ಮೇಲೆಯೇ ಸಮಸ್ಯೆಗಳ ಒತ್ತು ತಂದಂತಹ ಜನರನ್ನು ಕರೆದು, ಸ್ಥಳದಲ್ಲಿದ್ದ ಇತರೆ ಅಧಿಕಾರಿಗಳ ಸಮ್ಮುಖದಲ್ಲಿ ಅರ್ಜಿ ವಿಲೇವಾರಿಗೆ ಕ್ರಮವಹಿಸಿದರು. ಇಲ್ಲಿನ ವಿವಿಧ ಇಲಾಖೆಯ ಯೋಜನೆಗಳ ಸಂಬಂಧದ ವಸ್ತು ಪ್ರದರ್ಶನಗಳಿಗೆ ಭೇಟಿ ನೀಡಿ, ಪರಿಶೀಲಿಸಿ, ಚಾಲನೆ ನೀಡುವ ಜೊತೆಗೆ ಯೋಜನೆಗಳ ಜಾಗೃತಿ ಮೂಡಿಸುವುದು ಒಳ್ಳೆಯ ಬೆಳವಣಿಗೆ ಎಂದು ತಹಶೀಲ್ದಾರ್ ಜೂಗಲ್ ಮಂಜುನಾಯಕ ತಿಳಿಸಿದರು. ಪ್ರಜಾಸೇವಾ ಆಂದೋಲನಾದಲ್ಲಿ ಆರ್‌ಡಿಪಿಆರ್ 274, ಕಂದಾಯ 4, ಕೆಎಸ್‌ಆರ್‌ಟಿಸಿ, ಶಿಕ್ಷಣ ಇಲಾಖೆ ತಲಾ 1 ಅರ್ಜಿ, ಆಹಾರ ಇಲಾಖೆ 2, ಸರ್ವೆ 10, ಜೆಸ್ಕಾಂ 3, ಸಿಡಿಪಿಒ 3 ಸೇರಿದಂತೆ ಒಟ್ಟು 298 ಅರ್ಜಿಗಳು ಬಂದಿದ್ದು, ಹಂತ ಹಂತದಲ್ಲಿ ಅರ್ಜಿಗಳ ವಿಲೇವಾರಿಗೆ ಕ್ರಮವಹಿಸಿದರು. ಸರ್ವರ್ ಸಮಸ್ಯೆಯಲ್ಲಿ ಜನರು: ಇಲ್ಲಿನ ವಿವಿಧ ಇಲಾಖೆಯಿಂದ ತೆರೆದಿದ್ದ ಸಾರ್ವಜನಿಕರ ಆನ್‌ಲೈನ್ ಅರ್ಜಿ ಕೌಂಟರ್‌ಗಳಲ್ಲಿ ಕೆಲ ಸಮಯ



ಸರ್ವರ್ ಸಮಸ್ಯೆಯಿಂದ ಅರ್ಜಿದಾರರು ನಾಮುಂದು ತಾಮುಂದು ಎಬ್ಬಂತೆ ನೂಕುನುಗ್ಗಲಿನ ನಡುವೆ ಸಮಸ್ಯೆ ಎದುರಿಸಿದರು.

ಸಮಸ್ಯೆಗಳ ಅರ್ಜಿಗಳನ್ನು ಅರ್ಜಿಸಲು ಬಂದ ಜನರು, ಇಲ್ಲಿನ ಸರ್ವರ್ ಸಮಸ್ಯೆಯಲ್ಲೇ ಕಾಲ ಕಳೆಯಬೇಕಾಗಿದೆ. ಕೊನೆಗೆ ಸಮಸ್ಯೆಗಳ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗೆ ನೀಡಿ, ಪರಿಹರಿಸುವಂತೆ ಒತ್ತಾಯಿಸಿದರು. ಈ ಸಂದರ್ಭದಲ್ಲಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಆರ್.ಕೆ.ಶ್ರೀಕುಮಾರ್, ಎಡಿ ಮಲ್ಲನಗೌಡ ಕೆ.ಎಸ್, ಮುಖ್ಯಾಧಿಕಾರಿ ಬಿ.ಮಲ್ಲಿಕಾರ್ಜುನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಮೋಹನ್ ಕಾಳಾಪುರ, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ, ಗ್ರಾಮ ಆಡಳಿತಾಧಿಕಾರಿಗಳಾದ ಲಕ್ಷ್ಮಣ ನಾಯ್ಕ್, ಮನೋಜಕುಮಾರ ಸೇ–ರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿ, ಅಂಗನವಾಡಿ ಕಾರ್ಯಕರ್ತೆಯರು, ಸ್ಥಳೀಯ ನಿವಾಸಿಗಳು ಪಾಲ್ಗೊಂಡಿದ್ದರು.

ಬೆನಕನ ಕಾಲುವೆಯ ನೂತನ ಸೇತುವೆ ಅಂಚು ಕುಸಿತ: ಕಳಪೆ ಕಾಮಗಾರಿ ಆರೋಪ, ಸಾರ್ವಜನಿಕರ ಆತಂಕ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ: ಕೋಟೆಯ ಗಂಗಾವತಿ ರಸ್ತೆಯಲ್ಲಿ ವಿಜಯನಗರ ಕಾಲದ ಪುರಾತನ ಕಾಲುವೆ ಇದ್ದು, ಇತ್ತೀಚೆಗಷ್ಟೇ ಬೆನಕನ ಕಾಲುವೆಯ ಹತ್ತಿರ ನಿರ್ಮಾಣಗೊಂಡಿರುವ ರಾಜ್ಯ ಹೆದ್ದಾರಿ 29ರ ಸಂಪರ್ಕ ಸೇತುವೆ ಬೆನಕನ ಕಾಲುವೆಯ ನೂತನ ಸೇತುವೆಯ ಅಂಚು ಸಂಪೂರ್ಣವಾಗಿ ಕುಸಿದು ಬಿದ್ದಿದ್ದು, ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಮೇಲ್ನೋಟಕ್ಕೆ ಇದು ಚರಂಡಿಯಂತೆ ಕಾಣಿಸುವಷ್ಟು ಭೀಕರವಾಗಿ ಜರಿದು ಬಿದ್ದಿದ್ದು, ಸೇತುವೆಯ ಸುರಕ್ಷತೆಯ ಬಗ್ಗೆಯೇ ಈಗ ಸಾರ್ವಜನಿಕರಲ್ಲಿ ದೊಡ್ಡ ಮಟ್ಟದ ಆತಂಕ ಮೂಡಿಸಿದೆ. ತುಂಡಾದ ರಸ್ತೆ ಸಂಪರ್ಕ,

ಅಪಾಯಕಾರಿ ಕಂದಕ: ಹೊಸದಾಗಿ ನಿರ್ಮಿಸಲಾದ ಕಾಂಕ್ರೀಟ್ ತಡೆಗೋಡೆಯ ಪಕ್ಕದಲ್ಲೇ ರಸ್ತೆಯ ಮಣ್ಣು ಮತ್ತು ಜಲ್ಲಿಕಲ್ಲುಗಳು ಸಂಪೂರ್ಣವಾಗಿ ಕೊಚ್ಚಿಹೋಗಿವೆ. ಇದ–ರಿಂದಾಗಿ ಸೇತುವೆಯ ಪಕ್ಕದಲ್ಲಿ ದೊಡ್ಡ



ಕಂದಕ ಸೃಷ್ಟಿಯಾಗಿದ್ದು, ರಸ್ತೆಯ ಅಂಚು ಸಂಪೂರ್ಣವಾಗಿ ನಡುರಸ್ತೆಯವರೆಗೂ ಕುಸಿಯತೊಡಗಿದೆ. ಹೊಸದಾಗಿ ಕಟ್ಟಿದ ಸೇತುವೆಯು ಇಷ್ಟು ಬೇಗ ಜರಿದಿರುವುದು ಕಾಮಗಾರಿಯ ಗುಣಮಟ್ಟವನ್ನು ಎತ್ತಿ ತೋ–ರಿಸುತ್ತದೆ ಎಂದು ಸಾರ್ವಜನಿಕರು ದೂರಿದ್ದಾರೆ.

ಅಪಘಾತದ ಭೀತಿಯಲ್ಲಿ ವಾಹನ ಸವಾರರು: ಈ ಮಾರ್ಗದಲ್ಲಿ ದಿನನಿತ್ಯ ನೂರಾರು ವಾಹನಗಳು ಸಂಚರಿಸುತ್ತಿದ್ದು, ಸೇತುವೆಯ ಅಂಚೇ ಕುಸಿದಿರುವುದರಿಂದ ವಾಹನಗಳು ನಿಯಂತ್ರಣ ತಪ್ಪಿ ಕಂದಕಕ್ಕೆ ಬೀಳುವ ಅಪಾಯ ಎದುರಾಗಿದೆ. ಅದರಲ್ಲೂ ರಾತ್ರಿ ವೇಳೆಯಲ್ಲಿ ಸಂಚರಿಸುವ ದ್ವಿಚಕ್ರ ವಾಹನ ಸವಾರ–ರಿಗೆ ಈ ಜಾಗವು ಮೃತ್ಯುಕೂಪದಂತಾಗಿದೆ. ಇಷ್ಟಾದರೂ ಅಪಾಯದ ಮುನ್ಸೂಚನೆ ನೀಡುವ ಯಾವುದೇ ಎಚ್ಚರಿಕೆ ಫಲಕಗಳನ್ನು ಇಲ್ಲಿ ಅಳವಡಿಸದಿರುವುದು ಅಧಿಕಾರಿಗಳ ಬೇಜವಾಬ್ದಾರಿತನಕ್ಕೆ ಹಿಡಿದ ಕನ್ನಡಿಯಾಗಿದೆ.

ತಕ್ಷಣದ ಕ್ರಮಕ್ಕೆ ಆಗ್ರಹ:"ಕೋಟಿಗಟ್ಟಲೆ ಹಣ ವೆಚ್ಚ ಮಾಡಿ ನಿರ್ಮಿಸುವ ನೂತನ ಸೇತುವೆಗಳು ಮೊದಲ ಮಳೆಗೆ ಅಥ–'ವಾ ಕೆಲವೇ ದಿನಗಳಲ್ಲಿ ಹೀಗೆ ಕುಸಿದರೆ ಸಾರ್ವಜನಿಕರ ಪ್ರಾಣಕ್ಕೆ ಯಾರು ಹೊಣೆ?" ಎಂದು ಸ್ಥಳೀಯ ನಿವಾಸಿಗಳು ಪ್ರಶ್ನಿಸಿದ್ದಾರೆ. ಸಂಬಂಧಪಟ್ಟ ಲೋಕೋಪಯೋಗಿ ಇಲಾಖೆ ಹಾಗೂ ಗುತ್ತಿಗೆದಾರರು ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ, ಕುಸಿದಿರುವ ಸೇತುವೆಯ ಅಂಚನ್ನು ಬಲಪಡಿಸಬೇಕು ಮತ್ತು ಶಾಶ್ವತ ದುರಸ್ತಿ ಕಾರ್ಯ ಕೈಗೊಳ್ಳಬೇಕು ಎಂದು ಸಾರ್ವಜನಿಕರು ತೀವ್ರವಾಗಿ ಒತ್ತಾಯಿಸಿದ್ದಾರೆ.

ಶಿಕ್ಷಕಿಯ ಸೇವೆಗೆ ಜಿಲ್ಲಾ ಮಟ್ಟದ ಗೌರವ: ಸಾವಿತ್ರಿ ದೀಕ್ಷಿತ್ ಅವರಿಗೆ ಅಭಿನಂದನೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಶಿಕ್ಷಕರ ನಿರಂತರ ಪರಿಶ್ರಮ, ಮಕ್ಕಳ ಮೇಲಿನ ಕಾಳಜಿ, ಶೈಕ್ಷಣಿಕ ಬದ್ಧತೆ ಹಾಗೂ ಸಮಾಜಮುಖಿ ಸೇವೆಯನ್ನು ಗುರುತಿಸಿ ನೀಡಲಾಗುವ 2026–27ನೇ ಸಾಲಿನ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಗುರುಸಿದ್ದಯ್ಯನಮಠ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಉಪ್ಪಾರವಾಡಿಯ ಶಿಕ್ಷಕಿ ಶ್ರೀಮತಿ ಸಾವಿತ್ರಿ ದೀಕ್ಷಿತ್ ಅವರನ್ನು ಶಾಲೆಯ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಸೆ.26ರಂದು ಶಾಲಾ ಆವರಣದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು, ಶಿಕ್ಷಣಾಭಿಮಾನಿಗಳು, ಹಳೆಯ ವಿದ್ಯಾರ್ಥಿಗಳು, ಪೋಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ ಪ್ರಶಸ್ತಿ ಪುರಸ್ಕೃತ ಶಿಕ್ಷಕಿಗೆ ಶುಭಾಶಯಗಳನ್ನು ಸಲ್ಲಿಸಿದರು. ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿನಿ ಈಶ್ವರಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆಯನ್ನು ಪ್ರಸ್ತುತಪಡಿಸಿದರು. ಶಾಲೆಯ ಮುಖ್ಯಗುರುಗಳಾದ ಗಿರೀಶ್ ವಿ.ಬಿ. ಅವರು ಕಾರ್ಯಕ್ರಮದ ನಿರೂಪಣೆ, ಸ್ವಾಗತ ಹಾಗೂ ಪ್ರಾಸ್ತಾವಿಕ ಭಾಷಣ ಮಾಡಿದರು.



ಮಾತನಾಡಿದ ಮುಖ್ಯಗುರು ಗಿರೀಶ್ ವಿ.ಬಿ., "ನಮ್ಮ ಶಾಲೆಯ ಹೆಮ್ಮೆಯ ಶಿಕ್ಷಕಿಯಾದ ಸಾವಿತ್ರಿ ದೀಕ್ಷಿತ್ ಅವರಿಗೆ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ದೊರೆತಿರುವುದು ಇಡೀ ಶಾಲಾ ಕುಟುಂಬಕ್ಕೆ ಹೆಮ್ಮೆಯ ಸಂಗತಿ. ಶಿಕ್ಷಕಿಯವರ ಶೈಕ್ಷಣಿಕ ಸೇವೆ, ಮಕ್ಕಳ ಮೇಲಿನ ಕಾಳಜಿ ಮತ್ತು ಕರ್ತವ್ಯನಿಷ್ಠೆ ಇತರ–ರಿಗೆ ಪ್ರೇರಣೆಯಾಗಿದೆ. ಇಂತಹ ಸಮರ್ಪಣಾ ಮನೋಭಾವದ ಶಿಕ್ಷಕಿಯನ್ನು ಪಡೆದಿರುವ ನಮ್ಮ ಶಾಲೆಯ ಮಕ್ಕಳು ನಿಜಕ್ಕೂ ಧನ್ಯರು" ಎಂದು ಹೇಳಿದರು.

"ಎಲ್ಲ ಶಿಕ್ಷಕರಿಗೂ ಮಾದರಿ" ಅಮರೇಶ್ ಗಸ್ತಿ ಮಾತನಾಡಿ, ಸಾವಿತ್ರಿ ದೀಕ್ಷಿತ್ ಅವರು ತಮ್ಮ ವೃತ್ತಿಜೀವನದಲ್ಲಿ ತೋರಿಸಿರುವ ಬದ್ಧತೆ ಹಾಗೂ ಕಾರ್ಯತತ್ಪರತೆ ಎಲ್ಲ ಶಿಕ್ಷಕರಿಗೂ ಮಾದರಿಯಾಗಿದೆ. ಅವರ ಕಾರ್ಯವೈಖರಿಯನ್ನು ಗಮನಿಸಿ ಶಿಕ್ಷಕರು ಅನೇಕ ವಿಷಯಗಳನ್ನು ಕಲಿಯಬಹುದಾಗಿದೆ ಎಂದು ಹೇಳಿದರು.

ವಸಿಷ್ಠಧಾಮದ ಗುರುಗಳಾದ ನವಲಿ ಆಚಾರ್ಯ ಅವರು ಮಾತನಾಡಿ, ಶಾಲೆಯ ಕಲಿಕಾ ವಾತಾವರಣದ ಜೊತೆಗೆ ಸ್ವಚ್ಛತೆ, ಮಕ್ಕಳ ಶಿಸ್ತು ಹಾಗೂ ಉತ್ತಮ ನಡವಳಿಕೆ ಬೆಳೆಸುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು. ಸಾವಿತ್ರಿ ದೀಕ್ಷಿತ್ ಅವರ ಸೇವೆಯನ್ನು ಶ್ಲಾಘಿಸಿ ಅಭಿನಂದನೆ ಸಲ್ಲಿಸಿದರು.

"ಪ್ರಶಸ್ತಿಗಾಗಿ ಅವರು ಹೋಗಲಿಲ್ಲ, ಪ್ರಶಸ್ತಿಗಳೇ ಅವರನ್ನು ಹುಡುಕಿಕೊಂಡು ಬಂದಿವೆ" ಶಂಕರದೇವರು ಹಿರೇಮಠ ಮಾತನಾಡಿ, ಸಾವಿತ್ರಿ ದೀಕ್ಷಿತ್ ಅವರು ಪ್ರಶಸ್ತಿಗಳಿಗಾಗಿ ಎಂದಿಗೂ ಬೆನ್ನಟ್ಟಿದವರಲ್ಲ. ಅವರ ಪ್ರಾಮಾಣಿಕ ಸೇವೆ, ಶೈಕ್ಷಣಿಕ ಕಾರ್ಯ ಹಾಗೂ ಕರ್ತವ್ಯನಿಷ್ಠೆಯನ್ನು ಗುರುತಿಸಿ ಪ್ರಶಸ್ತಿಗಳೇ ಅವರನ್ನು ಹುಡುಕಿಕೊಂಡು ಬಂದಿವೆ. ಮುಂದಿನ ದಿನಗಳಲ್ಲಿ ಅವರಿಗೆ ರಾಜ್ಯಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಕೂಡ ದೊರೆಯಲಿ ಎಂದು ಹಾರೈಸಿದರು.

ಟಿಬಿಪಿ ಕ್ಯಾಂಪ್ ವಲಯದ ಸಿಆರ್‌ಪಿ ಚನ್ನವೀರಗೌಡ ಅವರು ಮಾತನಾಡಿ, ಶಿಕ್ಷಕಿಯವರ ಸಾಧನೆಯನ್ನು ಶ್ಲಾಘಿಸಿ ಅಭಿನಂದನೆ ಸಲ್ಲಿಸಿದರು. ಜಿಲ್ಲಾ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಮಾನಮ್ಮ ನಾಯಕ್, ನಿವೃತ್ತ ಮುಖ್ಯಗುರುಗಳಾದ ಶಕುಂತಲಾ, ಕನ್ನಡ ಸಾಹಿತ್ಯ ಪರಿಷತ್ ಸಿಂಧನೂರು ತಾಲೂಕು ಅಧ್ಯಕ್ಷರಾದ ಎಚ್. ಎಫ್. ಮಸ್ಕಿ ಸೇರಿದಂತೆ ಗಣ್ಯರು ಮಾತನಾಡಿ ಸಾವಿತ್ರಿ ದೀಕ್ಷಿತ್ ಅವರ ಶೈಕ್ಷಣಿಕ ಸೇವೆ ಮತ್ತು ಸಾಧನೆಯನ್ನು ಪ್ರಶಂಸಿಸಿ ಅಭಿನಂದನೆ ಸಲ್ಲಿಸಿದರು. "ಶಿಕ್ಷಕರು ಸದಾ ಕಲಿಕೆಯಲ್ಲಿ ನಿರತರಾಗಿರಬೇಕು" ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾವಿತ್ರಿ ದೀಕ್ಷಿತ್ ಅವರು ತಮ್ಮ ಶಿಕ್ಷಕ ವೃತ್ತಿಯ ಪಯಣವನ್ನು ಮೆಲುಕು ಹಾಕಿದರು. ಶಿಕ್ಷಕ ವೃತ್ತಿ ಕೇವಲ ಪಾಠ ಬೋಧನೆಗೆ ಸೀಮಿತವಾಗಿರದೆ, ಮಕ್ಕಳ ಭವಿಷ್ಯ ರೂಪಿಸುವ ಮಹತ್ತರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

"ಶಿಕ್ಷಕರು ಸದಾ ಕಲಿಕೆಯಲ್ಲಿ ನಿರತರಾಗಿರಬೇಕು. ಕಾಲ ಬದಲಾದಂತೆ ಶಿಕ್ಷಣ ಕ್ಷೇತ್ರದಲ್ಲಿಯೂ ಹೊಸ ಹೊಸ ಬದಲಾವಣೆಗಳು ಆಗುತ್ತಿವೆ. ಹೊಸ ಶೈಕ್ಷಣಿಕ ಪದ್ಧತಿಗಳು, ತಂತ್ರಜ್ಞಾನ ಹಾಗೂ ಬೋಧನಾ ವಿಧಾನಗಳಿಗೆ ಶಿಕ್ಷಕರು ಹೊಂದಿಕೊಳ್ಳಬೇಕು. ಸದಾ ಕ್ರಿಯಾಶೀಲರಾಗಿ ಮಕ್ಕಳ ಕಲಿಕೆಗೆ ಪೂರಕವಾದ ವಾತಾವರಣ ನಿರ್ಮಿಸುವುದು ಪ್ರತಿಯೊಬ್ಬ ಶಿಕ್ಷಕರ ಕರ್ತವ್ಯ" ಎಂದು ಅವರು ಹೇಳಿದರು.

ತಮ್ಮ ಸೇವೆಯನ್ನು ಗುರುತಿಸಿ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಿರುವ ಶಿಕ್ಷಣ ಇಲಾಖೆ ಹಾಗೂ ತಮ್ಮನ್ನು ಅಭಿನಂದಿಸಿದ ಶಾಲಾ ಕುಟುಂಬ, ಸಹೋದ್ಯೋಗಿಗಳು, ಪೋಷಕರು, ವಿದ್ಯಾರ್ಥಿಗಳು ಮತ್ತು ಶಿಕ್ಷಣಾಭಿಮಾನಿಗಳಿಗೆ ಅವರು ಕೃತಜ್ಞತೆ ಸಲ್ಲಿಸಿದರು.

ಶಾಲಾ ಕುಟುಂಬದ ಸಂಭ್ರಮ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಎಸ್‌ಡಿ–ಎಂಸಿ ಅಧ್ಯಕ್ಷೆ ಹುಲಿಗೆಮ್ಮ ವಹಿಸಿದ್ದರು. ಭವಿಷ್ಯಬೆಳಕು ಚಾರಿಟಬಲ್ ಟ್ರಸ್ಟ್‌ನ ಜಿಲ್ಲಾ ಸಂಚಾಲಕರಾದ ವಿರೇಶ್, ನಿವೃತ್ತ ದೈಹಿಕ ಶಿಕ್ಷಕರಾದ ಸುಣಗದ, ವಾರ್ಡ್ ಸದಸ್ಯರು, ಟಿಬಿಪಿ ಕ್ಯಾಂಪ್ ವಲಯದ ಮುಖ್ಯಗುರುಗಳು ಹಾಗೂ ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು, ಶಿಕ್ಷಣಪ್ರೇಮಿಗಳು, ಹಳೆಯ ವಿದ್ಯಾರ್ಥಿಗಳು, ಶಾಲೆಯ ಅಡುಗೆ ಸಿಬ್ಬಂದಿ, ಅಟೆಂಡರ್, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರಶಸ್ತಿ ಪುರಸ್ಕೃತ ಶಿಕ್ಷಕಿಯವರನ್ನು ಶಾಲಾ ಕುಟುಂಬದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮವು ಶಿಕ್ಷಕಿಯವರ ಸೇವೆಯನ್ನು ಸ್ಮ–ರಿಸುವುದರ ಜೊತೆಗೆ, ಶಾಲೆಯ ವಿದ್ಯಾರ್ಥಿಗಳು ಹಾಗೂ ಇತರ ಶಿಕ್ಷಕರಲ್ಲಿ "ಶಿಕ್ಷಣ ಸೇವೆಯೇ ಶ್ರೇಷ್ಠ ಸೇವೆ" ಎಂಬ ಸ್ಫೂರ್ತಿಯನ್ನು ಮೂಡಿಸಿತು. ಸಾವಿತ್ರಿ ದೀಕ್ಷಿತ್ ಅವರಿಗೆ ದೊರೆತ ಜಿಲ್ಲಾ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಗುರುಸಿದ್ದಯ್ಯನಮಠ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶೈಕ್ಷಣಿಕ ಸಮುದಾಯಕ್ಕೆ ಮತ್ತೊಂದು ಹೆಮ್ಮೆಯ ಗರಿಯಾಗಿ ಪರಿಣಮಿಸಿದೆ.

ವಚನ ದರ್ಶನ

ಛಲ ಬೇಕು ಶರಣಂಗೆ, ಪರಧನವನೊಲ್ಲೆನೆಂಬ;ಛಲ ಬೇಕು ಶರಣಂಗೆ, ಪರಸತಿಯನೊಲ್ಲೆನೆಂಬ;ಛಲ ಬೇಕು ಶರಣಂಗೆ, ಪರದೈವವನೊಲ್ಲೆನೆಂಬ;ಛಲ ಬೇಕು ಶರಣಂಗೆ, ಲಿಂಗ ಜಂಗಮ ಒಂದೇ ಎಂಬ;ಛಲ ಬೇಕು ಶರಣಂಗೆ, ಪ್ರಸಾದ ದಿಟವೆಂಬ;ಛಲವಿಲ್ಲದವರ ಮೆಚ್ಚ ನಮ್ಮ ಕೂಡಲಸಂಗಮದೇವ

ಛಲಬೇಕು ಶರಣಂಗೆ ಎಂಬುದು ವಿಶ್ವಗುರು ಜಗಜ್ಯೋತಿ ಬಸವಣ್ಣನವರು ಬರೆದಿರುವ ಅತ್ಯಂತ ಜನಪ್ರಿಯ ಹಾಗೂ ಮಾರ್ಗದರ್ಶಕ ವಚನವಾಗಿದೆ. ಈ ವಚನದಲ್ಲಿ ಬಸವಣ್ಣನವರು ಒಬ್ಬ ನಿಜವಾದ ಶರಣನಿಗೆ ಸಮಾಜದ ಜವಾಬ್ದಾರಿಯುತ ಸತ್ಪ್ರಜೆಗೆ ಇರಬೇಕಾದ ನೈತಿಕ ಮತ್ತು ಆಧ್ಯಾತ್ಮಿಕ ದೃಢಸಂಕಲ್ಪ ಅಥವಾ 'ಛಲ' ಎಂತಹುದು ಎಂಬುದನ್ನು ಸ್ಪಷ್ಟಪಡಿಸಿದ್ದಾರೆ.

ಇಲ್ಲಿ ಸಾಮಾನ್ಯವಾಗಿ ಬಳಸುವ ಹಠ ಅಥವಾ ಹಠಮಾರಿತನದ ಅರ್ಥದಲ್ಲಿ 'ಛಲ'ವನ್ನು ಬಳಸಲಾಗಿಲ್ಲ. ಬದಲಿಗೆ, ಉನ್ನತ ನೈತಿಕ ಬದುಕನ್ನು ಕಟ್ಟಿಕೊಳ್ಳಲು ಬೇಕಾದ ದೃಢ ನಿಷ್ಠೆಯನ್ನು ಬಸವಣ್ಣನವರು ವಿವರಿಸಿದ್ದಾರೆ:

ಪರಧನವನೊಲ್ಲೆನೆಂಬ ಛಲ: ಮತ್ತೊಬ್ಬರ ಹಣ, ಆಸ್ತಿ ಅಥವಾ ಸಂಪತ್ತಿಗೆ ಆಸೆ ಪಡಬಾರದು, ಕಷ್ಟಪಟ್ಟು ದುಡಿದು ಬದುಕಬೇಕು (ಕಾಯಕ ತತ್ವ) ಎಂಬ ದೃಢತೆ ಇರಬೇಕು.

ಪರಸತಿಯನೊಲ್ಲೆನೆಂಬ ಛಲ ಪರಸ್ತ್ರೀಯನ್ನು ತಾಯಿಯಂತೆ ಗೌರವಿಸಬೇಕು ಮತ್ತು ಕಾಮದ ದೃಷ್ಟಿಯಿಂದ ನೋಡಬಾರದು ಎಂಬ ನೈತಿಕ ನಿಷ್ಠೆ ಇರಬೇಕು.

ಪರದೈವವನೊಲ್ಲೆನೆಂಬ ಛಲ ಅರೆಕ್ಷಣದ ಲಾಭಕ್ಕಾಗಿ ಬೇರೆ ಬೇರೆ ದೈವಗಳನ್ನು ನಂಬದೆ, ಇಷ್ಟಲಿಂಗದ ಮೇಲೆ ಏಕದೇವೋಪಾಸನೆಯ ನಿಷ್ಠೆ ಇರಬೇಕು.

ಲಿಂಗ ಜಂಗಮ ಒಂದೇ ಎಂಬ ಛಲಪೂಜಿಸುವ ಲಿಂಗ ಮತ್ತು ಸಮಾಜದ ರೂಪದಲ್ಲಿರುವ ಜಂಗಮ ಜನರು ಎರಡೂ ಒಂದೇ, ಅಂದರೆ ದೇವರನ್ನು ಮಾನವರಲ್ಲಿಯೇ ಕಾಣಬೇಕು ಎಂಬ ಸಾಮಾಜಿಕ ಸಮಾನತೆಯ ದೃಷ್ಟಿ ಇರಬೇಕು.

ಇರಬೇಕು.ಪ್ರಸಾದ ದಿಟವೆಂಬ ಛಲ ಕಾಯಕದಿಂದ ಬಂದಿದ್ದೇ ನಿಜವಾದ ಪ್ರಸಾದ, ಅದನ್ನು ದೈವದತ್ತ ಎಂದು ಸ್ವೀಕರಿಸುವ ತೃಪ್ತಿ ಭಾವವಿರಬೇಕು.ಇಂತಹ ಉನ್ನತ ಗುಣಗಳ, ನೈತಿಕ ಮೌಲ್ಯಗಳ ದೃಢ ಸಂಕಲ್ಪವಿಲ್ಲದವರನ್ನು ನಮ್ಮ ಕೂಡಲಸಂಗಮದೇವನು ಎಂದಿಗೂ ಒಪ್ಪುವುದಿಲ್ಲ ಎಂದು ಬಸವಣ್ಣನವರು ಹೇಳುತ್ತಾರೆ. ಶರಣರ ವಚನಗಳು ಮನುಕುಲದ ದಾರಿದೀಪ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ದೇವದುರ್ಗದಲ್ಲಿ ಅದ್ದೂರಿಯಾಗಿ ನಡೆದ ಶ್ರೀ ಹೂಗಾರ ಮಾದಯ್ಯನವರ ಜಯಂತ್ಯೋತ್ಸವ

❏ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ಅಖಿಲ ಕರ್ನಾಟಕ ಹೂಗಾರ ಮಹಾಸಭಾ (ರಿ), ದೇವದುರ್ಗ ತಾಲೂಕು ಘಟಕದ ವತಿಯಿಂದ 12ನೇ ಶತಮಾನದ ಶಿವಶರಣ ಶ್ರೀ ಹೂಗಾರ ಮಾದಯ್ಯನವರ ಜಯಂತ್ಯೋತ್ಸವವನ್ನು ಸೆ.26ರಂದು ದೇವದುರ್ಗದ ಪ್ರವಾಸಿ ಮಂದಿರದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ತಾಲೂಕು ಹೂಗಾರ ಸಮಾಜದ ಅಧ್ಯಕ್ಷರಾದ ಶಂಕರ ಹೂಗಾರ, ಪ್ರಧಾನ ಕಾರ್ಯದರ್ಶಿ ಶರಣು ಹೂಗಾರ ಕಮದಾಳ, ಖಜಾಂಚಿ ಮುರಿಗೆಪ್ಪ ಹೂಗಾರ ಮಸರಕಲ್, ಗೌರವಾಧ್ಯಕ್ಷ ಹನುಮಂತರಾಯ ಹೂಗಾರ ಜೋಳದಡಗಿ ಸೇರಿದಂತೆ ಸಮಾಜದ ಹಿರಿಯರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಯಮನಪ್ಪ ಹೂಗಾರ ಬುಂಕಲ ದೊಡ್ಡಿ, ಮಲ್ಲಣ್ಣ ಹೂಗಾರ ನಗರಗುಂಡ, ಬಸವರಾಜ್ ಹೂಗಾರ ಯಮನೂರು, ಚಂದ್ರಮಪ್ಪ ಹೂಗಾರ ಚಿಕ್ಕಬೋದೂರು, ನಿಂಗಣ್ಣ ಹೂಗಾರ ರಾಮನಾಳ, ಬಸವ ಹೂಗಾರ ಸಲಿಕೆಪುರು ಸೇರಿದಂತೆ ಸಮಾಜದ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು. ಶಿವಶರಣ ಶ್ರೀ ಹೂಗಾರ ಮಾದಯ್ಯನವರ ಆದರ್ಶ, ಸಮಾಜಕ್ಕೆ ನೀಡಿದ ಕೊಡುಗೆ ಹಾಗೂ ಅವರ ಜೀವನ ಮೌಲ್ಯಗಳನ್ನು ಸ್ಮರಿಸಿ ಗೌರವ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜದ ಸಂಘಟನೆ ಮತ್ತು ಅಭಿವೃದ್ಧಿ ಕುರಿತು ಮುಖಂಡರು ಮಾತನಾಡಿದರು.

ಅಕ್ಟೋಬರ್ ಒಳಗೆ ತಾಲೂಕಿನ ಕೆರೆಗಳಿಗೆ ನೀರು ತುಂಬಿಸುವುದಾಗಿ ಶಾಸಕ ದರ್ಶನ್ ಧ್ರುವ ನಾರಾಯಣ್ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಭರವಸೆ

❏ ನೈಜ್ಯ ದೆಸೆ ನ್ಯೂಸ್

ತಾಂಡವಪುರ: ಅಕ್ಟೋಬರ್ ಒಳಗೆ ತಾಲೂಕಿನ ಕೆರೆಗಳಿಗೆ ನೀರು ತುಂಬಿಸುವುದಾಗಿ ಶಾಸಕ ದರ್ಶನ್ ಧ್ರುವ ನಾರಾಯಣ್ ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ತಾಲೂಕಿನ ಜನತೆಗೆಭರವಸೆ ನೀಡಿದರು ಪ್ರಜಾ ಸೇವಾ ಆಂದೋಲನ ಕಾರ್ಯಕ್ರಮದಲ್ಲಿ ಭಾಗವಹಿಸಿದ ತಾಲೂಕಿನ ರೈತರು ಸಾರ್ವಜನಿಕರು ಈ ಬಾರಿ ಮಳೆ ಇಲ್ಲದೆ ಕೆರೆಕಟ್ಟೆಗಳಿಗೆ ನೀರು ಇಲ್ಲದೆ ದನಕರುಗಳಿಗೆ ಕುಡಿಯಲು ನೀರಿಲ್ಲ ಅಲ್ಲದೆ ಅಕ್ಕಪಕ್ಕದ ಜಮೀನುಗಳಲ್ಲಿ ಇರುವ ಬೋರ್ವೆಲ್ಗಳು ಸಹ ನೀರಿಲ್ಲದೆ ರೈತರು ತುಂಬಾ ತೊಂದರೆ ಅನುಭವಿಸುತ್ತಿದ್ದಾರೆ



ಕೂಡಲೇ ಕೆರಗಳಿಗೆ ನೀರು ತುಂಬಿಸುವಂತೆ ಶಾಸಕರಲ್ಲಿ ರೈತರು ಮನವಿ ಮಾಡಿದರು ರೈತರ ಮನವಿಗೆ ಸ್ಪಂದಿಸಿದ ಶಾಸಕರು ಸಂಬಂಧಪಟ್ಟ ಅಧಿಕಾರಿಗಳಿಗೆ ಮಾತನಾಡಿ ಕೂಡಲೇ ಕೆರೆಗಳಿಗೆ ನೀರು ತುಂಬಿಸಲು ಕ್ರಮ ಕೈಗೊಳ್ಳುವುದಾಗಿ ಭರವಸೆ ನಡೆದರು ಮೈಸೂರು ಜಿಲ್ಲೆ ನಂಜನಗೂಡು ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಲೂಕಿನ ಹುಲ್ಲಹಳ್ಳಿ ಗ್ರಾಮದ ಪ್ರವಾಸಿ ಮಂದಿರದ ಆವರಣದಲ್ಲಿ ಇಂದು ಹೋಬಳಿ ಮಟ್ಟದ ಪ್ರಜಾ ಸೇವಾ ಆಂದೋಲನ ಸಭೆ ಶಾಸಕ ದರ್ಶನ್ ಧ್ರುವನಾರಾಯಣ್ ರವರ ಅಧ್ಯಕ್ಷತೆಯಲ್ಲಿ ಸಭೆ ನಡೆಸಿ, ಸಾರ್ವಜನಿಕರಿಂದ ಅಹವಾಲುಗಳನ್ನು , ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲಿಯೇ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ಶೀಘ್ರವಾಗಿ ಸ್ಪಂದಿಸಿ, ಅಗತ್ಯ ಪರಿಹಾರ ಕಲ್ಪಿಸುವಂತೆ ಅಧಿಕಾರಿಗಳಿಗೆ ಶಾಸಕ ದರ್ಶನ್ ಧ್ರುವನಾರಾಯಣ್ ರವರು ಸೂಚನೆ ಹಾಗೂ ನಿರ್ದೇಶನ ನೀಡಿದರು ಜನರ ಸಮಸ್ಯೆಗಳಿಗೆ ಸ್ಪಂದಿಸುವುದು, ಪರಿಹಾರ ಕಲ್ಪಿಸುವುದು ಮತ್ತು ಜನಸೇವೆಯನ್ನು ಪರಿಣಾಮಕಾರಿಯಾಗಿ ತಲುಪಿಸುವುದೇ ನಮ್ಮ ಗುರಿ ಮತ್ತು ಆದ್ಯತೆ. ಎಂದು ಶಾಸಕರು ತಿಳಿಸಿದರು ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ಕಳಲೆ ಕೇಶವಮೂರ್ತಿ ತಾಲೂಕು, ತಹಸೀಲ್ದಾರ್ ಸ್ಮಿತಾ ರಾಮು, ಇಓ ಜೆರಾಲ್ಡ್ ರಾಜೇಶ್, ನಗರಸಭಾ ಪೌರಾಯುಕ್ತರಾದ ಬಸವರಾಜ್ ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯಕ್ಕೆ ಮಾರುತಿ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸಾರ್ವಜನಿಕರು ಕಾಂಗ್ರೆಸ್ ಮುಖಂಡರು ಸಭೆಯಲ್ಲಿ ಭಾಗಿಯಾಗಿದ್ದರು

ರಾತ್ರಿ ವೇಳೆ ರಕ್ತಲೇಪನ ತಪ್ಪದೆ ಮಾಡಿಸಿ:ಡಾ ಪೂಜಿತಾ

❏ ನೈಜ್ಯ ದೆಸೆ ನ್ಯೂಸ್

ರಾಯಚೂರ: ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಆನೆಕಾಲು ರೋಗವನ್ನು ಆರಂಭದಲ್ಲಿಯೇ ತಡೆಗಟ್ಟುವ ದಿಶೆಯಲ್ಲಿ ರಾತ್ರಿ ವೇಳೆ ಆರೋಗ್ಯ ಇಲಾಖೆಯಿಂದ ಕೈಗೊಳ್ಳುವ ರಕ್ತಲೇಪನ ಕಾರ್ಯಕ್ಕೆ ಸಮುದಾಯವು ಸಹಕರಿಸಬೇಕು ಎಂದು ವೈದ್ಯಾಧಿಕಾರಿ ಡಾ ಪುಜಿ ಪೂಜಿತಾ ತಿಳಿಸಿದರು.

ರಾಯಚೂರು ತಾಲೂಕಿನ ಕಲ್ಮಲ ಪ್ರಾಥಮಿಕ ಆರೋಗ್ಯ ಕೇಂದ್ರದ ಮರ್ಚೆಡ ಗ್ರಾಮದಲ್ಲಿ ರಾತ್ರಿ ವೇಳೆ ರಕ್ತಲೇಪನ ಹಮ್ಮಿಕೊಂಡ ಕಾರ್ಯದ ಕುರಿತು ಮಾತನಾಡುತ್ತಾ, ಸಮುದಾಯದಲ್ಲಿ ನಮ್ಮೊಂದಿಗೆ ಹಲವು ವಿಧದ ಸೊಳ್ಳೆಗಳು ಇದ್ದು ಅದರಲ್ಲಿ ಕ್ಯೂಲೆಕ್ಸ್ ಸೊಳ್ಳೆ, ಆನೆಕಾಲು ರೋಗ ಹೊಂದಿದ ವ್ಯಕ್ತಿಗೆ ಕಚ್ಚಿ ಅದೆ ಸೊಳ್ಳೆ ಇನ್ನೊಬ್ಬರಿಗೆ ಕಚ್ಚಿದಾಗ ಬರಿಗಣ್ಣಿಗೆ ಕಾಣದ "ವುಚೆರೇರಿಯಾ ಬ್ಯಾಂಕ್ರೋಫಿ' 'ಬ್ರೂಗಿಯಾ ಮಲಾಯಿ ಎಂಬ ಪರಾವಲಂಬಿ ನೂಲಿನಂತಹ ಹುಳುಗಳನ್ನು ಅವರ ದೇಹಕ್ಕೆ ವರ್ಗಾಯಿಸುತ್ತವೆ.

ಈ ಹುಳುಗಳು ರಕ್ತ ಮತ್ತು ದುಗ್ಧರಸ ನಾಳಗಳಲ್ಲಿ ಬೆಳೆದು, ದ್ರವ ಹರಿಯದಂತೆ ತಡೆಯುತ್ತವೆ. ಇದರಿಂದ ಕೈ ಕಾಲುಗಳು ಆನೆಯ ಕಾಲಿನಂತೆ ದಪ್ಪವಾಗುವ ಮೂಲಕ ಶಾಶ್ವತವಾಗಿ ಆನೆಕಾಲು ರೋಗಕ್ಕೆ ಕಾರಣವಾಗುತ್ತಿದ್ದು, ರೋಗ ತಡೆಗಾಗಿ ರಾತ್ರಿ ವೇಳೆ ರಕ್ತಲೇಪನ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಅಲ್ಲದೆ ಸಾಮಾನ್ಯವಾಗಿ ಆನೆಕಾಲು ರೋಗ ಆರಂಭದಲ್ಲಿಯೇ ಗುರ್ತಿಸಲು ಆಯ್ದ ಗ್ರಾಮಗಳಲ್ಲಿ ರಾತ್ರಿ ವೇಳೆ ರಕ್ತಲೇಪನ ಕಾರ್ಯ ಮಾಡಲಾಗುತ್ತಿದ್ದು, ಆರಂಭದಲ್ಲಿ ಜ್ವರ ಮತ್ತು ಚಳಿ, ಚರ್ಮದ ಮೇಲೆ ಸೋಂಕು ಹಾಗೂ ಕಾಲುಗಳು, ತೋಳುಗಳು, ಸ್ತನಗಳು ಅಥವಾ ಜನನಾಂಗದ ಭಾಗಗಳಲ್ಲಿ ಊತ, ಕ್ರಮೇಣ ಚರ್ಮವು ದಪ್ಪವಾಗಿ, ಗಟ್ಟಿಯಾಗಿ, ಗರುಸಾಗಿ ಆನೆ ಚರ್ಮದಂತೆ ಕಾಣಿಸುವುದು. ಇದರಿಂದ ಅತಿಯಾದ ನೋವು ಮತ್ತು ನಡೆಯಲು ಕಷ್ಟವಾಗುವುದು. ಇದನ್ನು ರೋಗ ಲಕ್ಷಣಗಳನುಸಾರ ನಿರ್ವಹಣೆ ಚಿಕಿತ್ಸೆ ಮಾತ್ರ ಸಾಧ್ಯವಿದ್ದು, ಸಂಪೂರ್ಣ ಗುಣಪಡಿಸಲು ಕಷ್ಟಕರ. ಈ ಹಿನ್ನಲೆ ಮನೆಯ ಸುತ್ತಲು ಚರಂಡಿ, ತಿಪ್ಪೆಗಳ ಹತ್ತಿರ ಅನುಪಯುಕ್ತ ನೀರು ನಿಲ್ಲದಂತೆ ಹಾಗೂ ಮನೆ ಹೊಲ, ಗದ್ದೆಗಳಲ್ಲಿ ಕೆಲಸ ಮಾಡುವಾಗ ಸೊಳ್ಳೆಯಿಂದ ಕಚ್ಚಿಸಿಕೊಳ್ಳದಂತೆ ಜಾಗೃತಿ ವಹಿಸಲು ವಿನಂತಿಸಿದರು.

ಈ ಸಂಧರ್ಭದಲ್ಲಿ ಜಿಲ್ಲಾ



ಆರೋಗ್ಯ ಮೇಲ್ವಿಚಾರಕರು ಪುಂಡಲಿಕ ಗಂಜಿ. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ಭಾನುಕಾಂತ ರೆಡ್ಡಿ ಸಮುದಾಯ ಆರೋಗ್ಯಾಧಿಕಾರಿ ಚಂದ್ರಶೇಖರ್, ಆರೋಗ್ಯ ನೀರಿಕ್ಷಣಾಧಿಕಾರಿ ಅನ್ವರ್, ಆಶಾ ಕಾರ್ಯಕರ್ತೆ ಮಹಾದೇವಿ, ಪಾಲಮ್ಮ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.

ಹಟ್ಟಿ ಚಿನ್ನದ ಗಣಿ ಕಾರ್ಮಿಕರ 5ನೇ ದಿನದ ಉಪವಾಸ ಸತ್ಯಾಗ್ರಹಕ್ಕೆ ಕರ್ನಾಟಕ ಜನಪರ ಹೋರಾಟ ಸಂಸ್ಥೆಯಿಂದ ಬೆಂಬಲ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಹಟ್ಟಿ ಚಿನ್ನದ ಗಣಿಯ ಕಾರ್ಮಿಕರು ತಮ್ಮ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ನಡೆಸುತ್ತಿರುವ ಉಪವಾಸ ಸತ್ಯಾಗ್ರಹದ ಐದನೇ ದಿನದ ಹೋರಾಟಕ್ಕೆ ಕರ್ನಾಟಕ ಜನಪರ ಹೋರಾಟ ಸಂಸ್ಥೆ (ರಿ.), ಲಿಂಗಸಗೂರು ಹಾಗೂ ಮಸ್ಕಿ ತಾಲೂಕು ಸಮಿತಿಗಳ ವತಿಯಿಂದ ಬೆಂಬಲ ಸೂಚಿಸಲಾಯಿತು.

ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಮಹಾತ್ಮ ಗಾಂಧೀಜಿ ಅವರ ಭಾವಚಿತ್ರಗಳಿಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ರಾಜ್ಯ ಸಮಿತಿಯ ಆದೇಶದ ಮೇರೆಗೆ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪವಾಸ ಸತ್ಯಾಗ್ರಹದಲ್ಲಿ ಭಾಗವಹಿಸಿ ಕಾರ್ಮಿಕರ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು. ಈ ವೇಳೆ ಮಾತನಾಡಿದ ಕರ್ನಾಟಕ ಜನಪರ ಹೋರಾಟ ಸಮಿತಿಯ ಪ್ರತಿನಿಧಿಗಳು, ಹಟ್ಟಿ ಚಿನ್ನದ ಗಣಿಯ ಕಾರ್ಮಿಕರು ಮೆಡಿಕಲ್



ಅನ್‌ಫಿಟ್ ಜಾರಿ, ವೇತನ ಪರಿಷ್ಕರಣೆ, ಕಐಖಃ ಮತ್ತು ಬೋನಸ್, ಗುತ್ತಿಗೆ ಕಾರ್ಮಿಕ ಪದ್ಧತಿ ರದ್ದುಪಡಿಸುವುದು ಹಾಗೂ ಖಾಲಿ ಇರುವ 1,473 ಹುದ್ದೆಗಳನ್ನು ಭರ್ತಿ ಮಾಡುವುದು ಸೇರಿದಂತೆ ಹಲವು ಬೇಡಿಕೆಗಳಿಗಾಗಿ ಹೋರಾಟ ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಈ ಬೇಡಿಕೆಗಳು ಕೇವಲ ಕಾರ್ಮಿಕರ ಸಮಸ್ಯೆಗಳಲ್ಲ. ಕಾರ್ಮಿಕರ ಕುಟುಂಬಗಳ ಜೀವನ, ಮಕ್ಕಳ ಶಿಕ್ಷಣ ಹಾಗೂ ಅವರ ಭವಿಷ್ಯಕ್ಕೂ ಸಂಬಂಧಿಸಿದ ಪ್ರಮುಖ ವಿಚಾರಗಳಾಗಿವೆ. ಹಗಲು-ರಾತ್ರಿ ಎನ್ನದೆ ಗಣಿಯಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಮಸ್ಯೆಗಳನ್ನು ಸರ್ಕಾರ ಹಾಗೂ ಆಡಳಿತ ಮಂಡಳಿ ಗಂಭೀರವಾಗಿ ಪರಿಗಣಿಸಬೇಕು ಎಂದು ಒತ್ತಾಯಿಸಿದರು. ಕಾರ್ಮಿಕ ಪ್ರತಿನಿಧಿಗಳೊಂದಿಗೆ ತಕ್ಷಣ ಮಾತುಕತೆ ನಡೆಸಿ, ಕಾನೂನುಬದ್ಧ ಹಾಗೂ ನ್ಯಾಯಯುತ ರೀತಿಯಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಕಾರ್ಮಿಕರ ನ್ಯಾಯಯುತ ಹೋರಾಟಕ್ಕೆ ಕರ್ನಾಟಕ ಜನಪರ ಹೋರಾಟ ಸಮಿತಿಯ ಸಂಪೂರ್ಣ ಬೆಂಬಲವಿದ್ದು,

ಕಾರ್ಮಿಕರ ಧ್ವನಿಗೆ ನಮ್ಮ ಧ್ವನಿಯನ್ನು ಸೇರಿಸುತ್ತೇವೆ ಎಂದು ತಿಳಿಸಿದರು. ಕಾರ್ಮಿಕರ ನ್ಯಾಯಯುತ ಬೇಡಿಕೆಗಳಿಗೆ ಪರಿಹಾರ ದೊರೆಯುವವರೆಗೆ ಅವರ ಹೋರಾಟಕ್ಕೆ ಬೆಂಬಲ ಮತ್ತು ಸಹಕಾರ ಮುಂದುವರಿಸುವುದಾಗಿ ಭರವಸೆ ನೀಡಿದರು ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ವೆಂಕಟೇಶ್ ಇಸಂಪುರ್, ಗೌರವಾಧ್ಯಕ್ಷ ಮಹೆಬೂಬ್ ಪಾಷಾ ಮನೆಯಾರ್, ತಾಲೂಕು ಕಾರ್ಯಾಧ್ಯಕ್ಷ ಬಾಬಾಜಾನಿ, ತಾಲೂಕು ಪ್ರಧಾನ ಕಾರ್ಯದರ್ಶಿ ವಿಶ್ವನಾಥ ನಾಯ್ಡು, ಉಪಾಧ್ಯಕ್ಷರು ರವಿಕುಮಾರ್, ಬಾಬು ಸಾಬ್ ಎರಡೋಣ ಸಮಿತಿಯ ಇತರ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ವಿದ್ಯಾಂಜಲಿ 2.0 ಅಡಿಯಲ್ಲಿ ಸರ್ಕಾರಿ ಶಾಲೆಗೆ ಮೈಕ್ ಸೆಟ್ ಕೊಡುಗೆ

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸರ್ಕಾರಿ ಶಾಲೆಗಳ ಶೈಕ್ಷಣಿಕ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸಾರ್ವಜನಿಕರು, ಸಂಘ-ಸಂಸ್ಥೆಗಳು ಹಾಗೂ ಸ್ವಯಂಸೇವಕರು ಕೈಜೋಡಿಸುವ ವಿದ್ಯಾಂಜಲಿ 2.0 ಸ್ವಯಂಸೇವಾ ಕಾರ್ಯಕ್ರಮದ ಅಂಗವಾಗಿ ಭವಿಷ್ಯ ಬೆಳಕು ಚಾರಿಟಬಲ್ ಟ್ರಸ್ಟ್ ವತಿಯಿಂದ ಉಪ್ಪಾರವಾಡಿಯ ಗುರುಸಿದ್ದಯ್ಯನಮಠ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗೆ ?10 ಸಾವಿರ ಮೌಲ್ಯದ ಮೈಕ್ ಸೆಟ್‌ನ್ನು ಕೊಡುಗೆಯಾಗಿ ನೀಡಲಾಯಿತು.

ಸೆ.26ರಂದು ಶಾಲಾ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭವಿಷ್ಯ ಬೆಳಕು ಚಾರಿಟಬಲ್ ಟ್ರಸ್ಟ್‌ನ ಜಿಲ್ಲಾ ಸಂಚಾಲಕರಾದ ವಿರೇಶ್ ಅವರು ಶಾಲೆಯ ಮುಖ್ಯಗುರುಗಳು ಹಾಗೂ ಶಾಲಾ ಪ್ರತಿನಿಧಿಗಳಿಗೆ ಮೈಕ್ ಸೆಟ್ ಹಸ್ತಾಂತರಿಸಿದರು. ಕಾರ್ಯಕ್ರಮದ ಆರಂಭದಲ್ಲಿ ವಿದ್ಯಾರ್ಥಿನಿ ಈಶ್ವರಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆಯನ್ನು ಪ್ರಸ್ತುತಪಡಿಸಿದರು. ಶಾಲೆಯ ಮುಖ್ಯಗುರುಗಳಾದ ಗಿರೀಶ್ ವಿ.ಬಿ. ಅವರು ಸ್ವಾಗತ, ನಿರೂಪಣೆ ಹಾಗೂ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅವರು ಮಾತನಾಡಿ, "ಭವಿಷ್ಯ ಬೆಳಕು



ಚಾರಿಟಬಲ್ ಟ್ರಸ್ಟ್ ನಮ್ಮ ಶಾಲೆಗೆ ನಿರಂತರವಾಗಿ ಸಹಕಾರ ನೀಡುತ್ತಿದೆ. ಶಾಲೆಯಲ್ಲಿ ಅಟೆಂಡರ್ ಹುದ್ದೆ ಲಭ್ಯವಾದ ನಂತರ ಶಾಲೆಯ ಸ್ವಚ್ಛತೆ ಹಾಗೂ ವಿವಿಧ ದೈನಂದಿನ ಕೆಲಸಗಳಿಗೆ ಹೆಚ್ಚಿನ ಅನುಕೂಲವಾಗಿದೆ. ಇದೀಗ ಶಾಲೆಯ ಶೈಕ್ಷಣಿಕ ಚಟುವಟಿಕೆಗಳು, ಸಭೆಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಇತರ ಕಾರ್ಯಕ್ರಮಗಳಿಗೆ ಉಪಯುಕ್ತವಾಗುವ ಮೈಕ್ ಸೆಟ್‌ನ್ನು ನೀಡಿರುವುದು ಶಾಲೆಗೆ ಬಹಳ ಸಹಕಾರಿಯಾಗಿದೆ" ಎಂದು ಹೇಳಿದರು.

"ಅಗತ್ಯವಿರುವ ಶಾಲೆಗಳಿಗೆ ಸಹಕಾರ ಶ್ಲಾಘನೀಯ" ಟಿಬಿಪಿ ಕ್ಯಾಂಪ್ ವಲಯದ ಸಿಆರ್‌ಪಿ ಚನ್ನವೀರಗೌಡ ಅವರು ಮಾತನಾಡಿ, ವಿದ್ಯಾಂಜಲಿ 2.0 ಸ್ವಯಂಸೇವಾ ಕಾರ್ಯಕ್ರಮದ ಉದ್ದೇಶವನ್ನು ವಿವರಿಸಿದರು. ಶಾಲೆಗಳ ಅಗತ್ಯಗಳನ್ನು ಗುರುತಿಸಿ, ಅವುಗಳಿಗೆ ಅನುಗುಣವಾಗಿ ವಿವಿಧ ರೀತಿಯ ಕೊಡುಗೆಗಳನ್ನು ನೀಡುತ್ತಿರುವ ಭವಿಷ್ಯ ಬೆಳಕು ಚಾರಿಟಬಲ್ ಟ್ರಸ್ಟ್‌ನ ಕಾರ್ಯವನ್ನು ಶ್ಲಾಘಿಸಿದರು.

ಸರ್ಕಾರಿ ಶಾಲೆಗಳ ಶೈಕ್ಷಣಿಕ ವಾತಾವರಣ ಸುಧಾರಿಸಲು ಸಮುದಾಯದ ಸಹಭಾಗಿತ್ವ ಅತ್ಯಂತ ಅಗತ್ಯವಾಗಿದ್ದು, ಇಂತಹ ಸೇವಾ ಕಾರ್ಯಗಳು ಇತರ ಸಂಘ-ಸಂಸ್ಥೆಗಳು ಹಾಗೂ ದಾನಿಗಳಿಗೂ ಪ್ರೇರಣೆಯಾಗಬೇಕು ಎಂದು ಅವರು ಹೇಳಿದರು. ಶಾಲಾ ಅಭಿವೃದ್ಧಿಗೆ ಸಮುದಾಯದ ಸಹಭಾಗಿತ್ವ ವಿದ್ಯಾಂಜಲಿ 2.0 ಕಾರ್ಯಕ್ರಮದ ಮೂಲಕ ಸರ್ಕಾರಿ ಶಾಲೆಗಳ ಅಗತ್ಯಗಳನ್ನು ಪೂರೈಸುವಲ್ಲಿ ಸ್ವಯಂಸೇವಾ ಸಂಸ್ಥೆಗಳು, ಹಳೆಯ ವಿದ್ಯಾರ್ಥಿಗಳು, ಶಿಕ್ಷಣಪ್ರೇಮಿಗಳು ಹಾಗೂ ಸಾರ್ವಜನಿಕರು ಕೈಜೋಡಿಸುತ್ತಿರುವುದು ಸ್ವಾಗತಾರ್ಹವಾಗಿದೆ. ಶಾಲೆ ಮತ್ತು ಸಮಾಜದ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುವಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷೆ ಹುಲಿಗೆಮ್ಮ ವಹಿಸಿದ್ದರು. ಕಾರ್ಯಕ್ರಮದಲ್ಲಿ ಭವಿಷ್ಯ ಬೆಳಕು ಚಾರಿಟಬಲ್ ಟ್ರಸ್ಟ್‌ನ ಜಿಲ್ಲಾ ಸಂಚಾಲಕರಾದ ವಿರೇಶ್, ನಿವೃತ್ತ ದೈಹಿಕ ಶಿಕ್ಷಕರಾದ ಸುಣಗದ, ಕರ್ನಾಟಕ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಶ್ರೀಮತಿ ಮಾನಮ್ಮ ನಾಯಕ್, ಕನ್ನಡ ಸಾಹಿತ್ಯ ಪರಿಷತ್ ಸಿಂಧನೂರು ತಾಲೂಕು ಅಧ್ಯಕ್ಷರಾದ ಎಚ್.ಎಫ್. ಮಸ್ಕಿ, ಶಂಕರದೇವರು ಹಿರೇಮಠ, ಅಮರೇಶ್ ಗಸ್ತಿ, ವಾರ್ಡ್ ಸದಸ್ಯರು, ಟಿಬಿಪಿ ಕ್ಯಾಂಪ್ ವಲಯದ ಮುಖ್ಯಗುರುಗಳು ಹಾಗೂ ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು, ಶಿಕ್ಷಣಪ್ರೇಮಿಗಳು, ಹಳೆಯ ವಿದ್ಯಾರ್ಥಿಗಳು, ಶಾಲೆಯ ಅಡುಗೆ ಸಿಬ್ಬಂದಿ, ಅಟೆಂಡರ್, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಾಲೆಯ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಉಪಯುಕ್ತವಾಗುವ ?10 ಸಾವಿರ ಮೌಲ್ಯದ ಮೈಕ್ ಸೆಟ್‌ನ್ನು ಕೊಡುಗೆಯಾಗಿ ನೀಡಿದ ಭವಿಷ್ಯ ಬೆಳಕು ಚಾರಿಟಬಲ್ ಟ್ರಸ್ಟ್‌ಗೆ ಶಾಲಾ ಆಡಳಿತ ಮಂಡಳಿ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳ ಪರವಾಗಿ ಕೃತಜ್ಞತೆ ಸಲ್ಲಿಸಲಾಯಿತು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101